ಸಂಪುಟ : 9 ಸಂಚಿಕೆ 47 ಪುಟ : 4 ಬೆಲೆ: 3.00 ಬುಧವಾರ ಮಾರ್ಚ್ 20 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

**WALK IN INTERVIEW**

Vacancy open

Bagalkot , Bijapur , Bidar , Kalaburgi, Mangalore , Belgaum
(Required For Bank Recovery and Collections)

- Filed collection Executive
- Two wheeler Must
- Salary up to 15000/- & Attractive Incentives Facility

Contact Number : 8310034934

Volume : 9 Issue : 47 Pages : 4 Price : 3.00 Wednesday March 20 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ಅವಳಿ ನಗರದಲ್ಲಿ ಮಾರ್ಚ್ 20–3–2024ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ : ವಾರ್ಡ್ ನಂ. 22ರಲ್ಲಿ ಗಿರಣಿ ಲೈನ್, ದಖನಿಯವರ ಲೈನ್, ಈಶ್ವರ ಗುಡಿ ಲೈನ್, ಧಾರವಾಡದವರ ಲೈನ್, 1ರಿಂದ 5 ಲೈನ್, ಶುದ್ಧ ನೀರಿನ ಘಟಕ, ವಾರ್ಡ್ ನಂ. 01ರಲ್ಲಿ ಎಸ್.ಎಮ್.ಕೃಷ್ಣಾ ನಗರ ಕೆಳಗಿನ ಭಾಗ, ಮೇಲಿನ ಭಾಗ, ವಾರ್ಡ್ ನಂ. 29ರಲ್ಲಿ ಡಂಬಳದ ಲೈನ್, ಮಸೂತಿ ಭಾಗಗಳು ಉಳಿದ ಕೆಲವು ಭಾಗಗಳು,

ವಾರ್ಡ್ ನಂ. 7 ಪೆಂಡಾರ್ ಓಣಿ, ಮಲ್ಲೇಶಪ್ಪನ ಲೈನ್, ನಂದರಗಿಯವರ ಲೈನ್, ಪಿಂಡಕೂರ ಅವರ ಲೈನ್, ಘಚ್ಚಿಯವರ ಲೈನ್, ಬಚ್ಚಲಕ್ಕಮ್ಮನ ಗುಡಿ ಲೈನ್, ಚೆನ್ನಗೌಡ್ರ ಲೈನ್, ಹುಚ್ಚನಗೌಡ್ರ ಲೈನ್.

ವಿಶೇಷ ಸೂಚನೆ : ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸಲು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗುತ್ತಿಗೆದಾರರ ಬೇಡಿಕೆ ಈಡೇರಿಕೆಗೆ ಮನವಿ




■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ನಗರಸಭೆ ಪೌರಾಯುಕ್ತರಾಗಿ ಅಧಿಕಾರ ವಹಿಸಿಕೊಂಡ ಮಾರುತಿ ಬ್ಯಾಕೋಡರವರು 4 ತಿಂಗಳು ಕಳೆದರೂ ನಗರಸಭೆಯ ಅಭಿವೃದ್ಧಿ ಕಾಮಗಾರಿಗಳನ್ನು ಮುಂದುವರೆಸುತ್ತಿಲ್ಲ ಎಂದು ಗದಗ–ಬೆಟಗೇರಿ ನಗರಸಭೆ ಸಿವ್ಹಿಲ್ ಗುತ್ತಿಗೆದಾರರ ಸಂಘದ ವತಿಯಂದ ಗದಗ–ಬೆಟಗೇರಿ ಪೌರಾಯುಕ್ತರಿಗೆ ಮನವಿ ಸಲ್ಲಿಸಿದರು.

ಸಂಘ ಅಧ್ಯಕ್ಷ ಆರ್.ಎಫ್. ಹುಣಸೀಮರದ ಮನವಿ ಸಲ್ಲಿಸಿ ಮಾತನಾಡಿ, ನಗರಸಭೆ ಪೌರಾಯುಕ್ತರು ನೀರಿನ ಬಿಲ್, ಕೊಳವೆ ಬಾವಿ, ಯು.ಜಿ.ಡಿ ಹಾಗೂ ಅಭಿವೃದ್ಧಿ ಕಾಮಗಾರಿಗಳ ಬಿಲ್ ಕೇಳಿದರೆ ನಾಳೆ ಎನ್ನುತ್ತು ಕಾಲ ಕಳೆಯುತ್ತಿದ್ದಾರೆ. ಇ.ಎಮ್.ಡಿ., ಎಸ್.ಡಿ. ಗುತ್ತಿಗೆದಾರರ ಯಾವ ಕೆಲಸಗಳೂ ಆಗುತ್ತಿಲ್ಲ ಎಂದು ಆರೋಪಿಸಿದರು.

7–09–2024ರಿಂದ 15ನೇ ಹಣಕಾಸು ಟೆಂಡರ್ ಇದ್ದು, ಅದಕ್ಕೆ ಪೌರಾಯುಕ್ತರು ಕಾರ್ಯದೇಶ ಮಾಡಿಲ್ಲ. ಗುತ್ತಿಗೆದಾರರಿಗೆ ಹಂತ ಹಂತವಾಗಿ ಬಿಲ್, ಇ.ಎಮ್.ಡಿ., ಎಸ್.ಡಿ. ನೀಡುವಂತೆ ಪೌರಾಯುಕ್ತರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಎ.ಬಿ. ಕಟಗಿ, ಎಸ್.ಎಸ್. ಹೂಲಿ, ವ್ಹಿ.ಕೆ. ಗುರುಮಠ, ಜಿ.ಎಸ್. ಹಿರೇಮಠ, ಎಂ.ಸಿ. ಶೇಖ, ಬಿ.ಪಿ. ಕಲ್ಮನಿ, ಆರ್.ಎಮ್. ತಡಹಾಳ, ಡಿ.ಆರ್. ಗಾಯಕವಾಡ, ಎಲ್.ಎಸ್. ಮುಳಗುಂದ, ಎಮ್.ಎಚ್. ತೋರಗಲ್, ಕೆ.ಎಂ. ಬಳ್ಳಾರಿ, ಬಿ.ಎನ್. ಗುಡಸಾಲಿ, ಎಸ್.ಎಮ್. ಚಳಗೇರಿ ಸೇರಿದಂತೆ ಗುತ್ತಿಗೆದಾರರು ಉಪಸ್ಥಿತರಿದ್ದರು.

### ಜಿಲ್ಲೆಯಾದ್ಯಂತ ಏಪ್ರಿಲ್ 1ರಿಂದ ನರೇಗಾ ಕೆಲಸ ಆರಂಭಿಸಿ: ಜಿ.ಪಂ ಸಿಇಓ ಭರತ್ ಎಸ್

## 'ಉದ್ಯೋಗ ಖಾತ್ರಿ–ದುಡಿಮೆ ಖಾತ್ರಿ'

■ ವಿಜಯಸಾಕ್ಷಿ ಸುದ್ದಿ, ಗದಗ

ಆಯುಕ್ತಾಲಯದ ನಿರ್ದೇಶನದಂತೆ ಜಿಲ್ಲೆಯಾದ್ಯಂತ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ 'ವಲಸೆ ಯಾಕ್ರೀ, ನಿಮ್ಮೂರಲ್ಲೇ ಉದ್ಯೋಗ ಖಾತ್ರಿ/ ಉದ್ಯೋಗ ಖಾತ್ರಿ ದುಡಿಮೆ ಖಾತ್ರಿ' ಅಭಿಯಾನವನ್ನು ಮಾರ್ಚ್ 15ರಿಂದ ಮೇ ಮಾಹೆಯ ಅಂತ್ಯದವರೆಗೂ ಹಮ್ಮಿಕೊಂಡಿದ್ದು, ಗ್ರಾಮೀಣರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಜಿಲ್ಲಾ ಪಂಚಾಯಿತಿ ಸಿಇಓ ಭರತ್ ಎಸ್ ಮನವಿ ಮಾಡಿದ್ದಾರೆ.

ನಮ್ಮ ಜಿಲ್ಲೆಯ ಕೆಲವು ಗ್ರಾಮಗಳಿಂದ ಸಾಮಾನ್ಯವಾಗಿ ಪ್ರತಿ ವರ್ಷ ಬೇಸಿಗೆ ಬಂತೆಂದರೆ ಊರನ್ನು ಬಿಟ್ಟು ನಗರ ಪ್ರದೇಶಗಳಿಗೆ ಉದ್ಯೋಗ ಅರಸಿ ವಲಸೆ ಹೋಗುವುದು ಸರ್ವೇಸಾಮಾನ್ಯವಾಗಿ ಕಂಡುಬರುತ್ತದೆ. ಹಾಗಾಗಿ ಉದ್ಯೋಗ ಚೀಟಿ ಹೊಂದಿರುವ ಎಲ್ಲಾ ಕುಟುಂಬಗಳು ಗ್ರಾಮ ಪಂಚಾಯಿತಿ ವತಿಯಿಂದ ಹಮ್ಮಿಕೊಂಡಿರುವ ಈ ಅಭಿಯಾನದಲ್ಲಿ ಸ್ಥಳೀಯವಾಗಿ ಉದ್ಯೋಗ ಪಡೆದು ಯೋಜನೆಯ ಸೌಲಭ್ಯವನ್ನು ಪಡೆಯಬೇಕು.

ಈ ಅಭಿಯಾನದ ಮೂಲ ಉದ್ದೇಶವೇ ಬೇಸಿಗೆ ವಲಸೆಯನ್ನು ನಿಯಂತ್ರಣ ಮಾಡುವುದಾಗಿದ್ದು,



ಈಗಾಗಲೇ ಯೋಜನೆಯಡಿ ಕಾರ್ಯ ನಿರ್ವಹಿಸುತ್ತಿರುವ ಗ್ರಾಮ ಕಾಯಕ ಮಿತ್ರ/ತಾಂಡಾ ರೋಜಗಾರ ಮಿತ್ರ ಹಾಗೂ ಕ್ರಿಯಾಶೀಲ ಕಾಯಕ ಬಂಧುಗಳಿಂದ ಉದ್ಯೋಗ ಚೀಟಿದಾರರ ಕುಟುಂಬಗಳ ಮನೆ–ಮನೆ ಭೇಟಿ ಕಾರ್ಯ ನಡೆಯುತ್ತಿದ್ದು, ಏಪ್ರೀಲ್ 1ರಿಂದಲೇ ಸ್ಥಳೀಯವಾಗಿ ಕೆಲಸ ನೀಡಲಾಗುತ್ತಿದೆ.

ಬಿಸಿಲಿನ ತಾಪ ಹೆಚ್ಚಾಗಿರುವ ಕಾರಣ ಕೆಲಸದ ಸ್ಥಳಗಳಲ್ಲಿ ಕೂಲಿಕಾರರಿಗೆ ಪ್ರಥಮ ಚಿಕಿತ್ಸೆ, ನೆರಳು, ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗುತ್ತದೆ ಎಂದು



ನಮೂನೆ 6ರಲ್ಲಿ ಕೂಲಿ ಬೇಡಿಕೆ ಪಡೆಯುವಂತೆ ನಿರ್ದೇಶನ ನೀಡಲಾಗಿದೆ. ಜಿಲ್ಲೆಯು ಕಳೆದ 2023–24ನೇ ಸಾಲಿನಲ್ಲಿ ಆಯುಕ್ತಾಲಯದ ಗುರಿಯನ್ನು ವರ್ಷಕ್ಕಿಂತ ಮೊದಲೇ ಸಾಧಿಸಿದ್ದು, ಪ್ರಸಕ್ತ ವರ್ಷವೂ ಸಹ ಬೇಗನೆ ಕೆಲಸ ನೀಡುವ ಮೂಲಕ ಗುಳೆ ತಪ್ಪಿಸಿ ಸ್ಥಳೀಯವಾಗಿ ಈ ವರ್ಷವೂ ಕೂಡಾ ಕೂಲಿಕಾರರಿಗೆ ಉದ್ಯೋಗ ಒದಗಿಸುವಂತೆ ತಳಮಟ್ಟದ ಎಲ್ಲಾ ಅಧಿಕಾರಿ/ಸಿಬ್ಬಂದಿಗಳಿಗೆ ಸೂಚನೆ ನೀಡಲಾಗಿದೆ.

ತಿಳಿಸಿರುವ ಸಿಇಓ ಭರತ್ ಎಸ್, ಕೂಲಿಕಾರರು ಕೆಲಸದ ಸ್ಥಳದಲ್ಲಿ ಮಕ್ಕಳನ್ನು ಕರೆತರಬಾರದು. ಅದಕ್ಕಾಗಿ ಆರು ತಿಂಗಳಿಂದ ಮೂರು ವರ್ಷದ ಮಕ್ಕಳಿಗೆ ನಮ್ಮ ಗ್ರಾಮ ಪಂಚಾಯಿತಿಯಿಂದ 'ಕೂಸಿನ ಮನೆ' ಆರಂಭ ಮಾಡಿದ್ದು, ತಮ್ಮ ಮಕ್ಕಳನ್ನು ಅಲ್ಲಿಯೇ ಬಿಟ್ಟು ಕೆಲಸಕ್ಕೆ ಹೋಗಲು ಅವಕಾಶವಿದೆ. ಇದರಿಂದ ಪಾಲಕರಿಬ್ಬರೂ ಯೋಜನೆಯಡಿ ಕೆಲಸಕ್ಕೆ ತೆರಳಿದಾಗ ಮಕ್ಕಳ ಲಾಲನೆ–ಪಾಲನೆಯ ಕೊರತೆ ನೀಗಿದಂತಾಗಿದೆ. ಇದರಿಂದ ಯೋಜನೆಯಡಿ ಹೆಚ್ಚಿನ ಜನರು ಪಾಲ್ಗೊಂಡು ಯೋಜನೆಯ ಸೌಲಭ್ಯ ಪಡೆದುಕೊಳ್ಳಬೇಕೆಂದು ಕೋರಿದ್ದಾರೆ.

### ಅಂಚೆ ಮತಪತ್ರ ವಿತರಣೆ ಕುರಿತ ನೋಡಲ್ ಅಧಿಕಾರಿಗಳ ಸಭೆ

## ಅಂಚೆ ಮತಪತ್ರ ವಿತರಣೆ ವ್ಯವಸ್ಥಿತವಾಗಿರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಸಾರ್ವತ್ರಿಕ ಚುನಾವಣೆ ಪ್ರಯುಕ್ತ, ಚುನಾವಣಾ ಪ್ರಕ್ರಿಯೆಯಲ್ಲಿ ತೊಡಗಿರುವವರಿಗೆ ಹಾಗೂ ಅಗತ್ಯ ಸೇವೆಗಳಲ್ಲಿ ತೊಡಗಿರುವ ಎಲ್ಲಾ ನೌಕರರಿಗೆ ಅಂಚೆ ಮತದಾನಕ್ಕೆ ಅವಕಾಶ ನೀಡಲಾಗಿದ್ದು, ಎಲ್ಲರೂ ತಮ್ಮ ಮತದಾನದ ಹಕ್ಕನ್ನು ಚಲಾಯಿಸಲು ಬದ್ಧರಾಗಬೇಕು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ವೈಶಾಲಿ ಎಂ.ಎಲ್ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಮಂಗಳವಾರ ನಡೆದ ಅಂಚೆ ಮತಪತ್ರ ವಿತರಣೆ ಕುರಿತ ನೋಡಲ್ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಒಮ್ಮೆ ಅಂಚೆ ಮತದಾನಕ್ಕೆ ಅರ್ಜಿ ಸಲ್ಲಿಸಿದಲ್ಲಿ ಮತಕೇಂದ್ರಕ್ಕೆ ಬಂದು ಮತದಾನ ಮಾಡಲು



ಚುನಾವಣಾ ಅಯೋಗವು ಅವಕಾಶ ಕಲ್ಪಿಸುವುದಿಲ್ಲ. ಈ ವಿಷಯವನ್ನು ಚುನಾವಣಾ ಕಾರ್ಯನಿರತ ನೌಕರರು ಹಾಗೂ ಮತದಾರರಿಗೆ ಮನವರಿಕೆ ಮಾಡಿಕೊಡಬೇಕು ಎಂದು ಹೇಳಿದರು.

85 ವರ್ಷ ಮೇಲ್ಪಟ್ಟವರಿಗೆ, ಅಂಗವಿಕಲರಿಗೆ ಹಾಗೂ ಕೋವಿಡ್‌ನಿಂದ ಬಾಧಿತರಾದವರಿಗೆ ಅಂಚೆ ಮತದಾನಕ್ಕೆ ಅವಕಾಶ ಕಲ್ಪಿಸಲಾಗಿದೆ. ಆದರೆ, ಮತದಾರರು ಮತಗಟ್ಟೆಗೆ ಹೋಗಿ ಹಕ್ಕು ಚಲಾಯಿಸಿದಾಗ ಮತದಾನ ಹಬ್ಬ ಎನಿಸಿಕೊಳ್ಳುತ್ತದೆ. ಸಾಧ್ಯವಾದಷ್ಟು ಮತಕೇಂದ್ರಗಳಿಗೆ ಹೋಗಿ ಮತದಾನ ಮಾಡಲು ಜನರನ್ನು ಪ್ರೇರೇಪಿಸಬೇಕು. ಮತಕೇಂದ್ರಕ್ಕೆ ಬರಲು ಆಗದವರಿಗೆ ಅಂಚೆ ಮತಪತ್ರ ಕಡ್ಡಾಯವಾಗಿ ವಿತರಣೆ ಮಾಡಿ ಮತದಾನ ಮಾಡುವ ಕ್ರಮಗಳನ್ನು ವಿವರಿಸಬೇಕೆಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಸೂಚಿಸಿದರು.

▶▶ 3ನೇ ಪುಟಕ್ಕೆ

### ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿಯಿಂದ ಜಿಲ್ಲಾ ಮಟ್ಟದ ಕಾರ್ಯಕ್ರಮ ಆಯೋಜನೆ

## ಪದಾಧಿಕಾರಿಗಳ, ಕಾರ್ಯಕರ್ತರ ಸಭೆ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಎಪಿಎಂಸಿ ಆವರಣದಲ್ಲಿರುವ ಕೆ.ಎಚ್. ಪಾಟೀಲ ಸಭಾಂಗಣದಲ್ಲಿ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿಯ ಪದಾಧಿಕಾರಿಗಳ ಹಾಗೂ ಜಿಲ್ಲಾ ಮಟ್ಟದ ಕಾರ್ಯಕರ್ತರ ಸಭೆ ಮಾ. 20ರಂದು ಸಂಜೆ 4ಕ್ಕೆ ಜರುಗಲಿದೆ.

ಹಾವೇರಿ ಲೋಕಸಭಾ ಚುನಾವಣೆಯ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಉಪಸ್ಥಿತಿಯಲ್ಲಿ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರು ಹಾಗೂ ರೋಣ ಮತಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ ಸಭೆಯನ್ನು ಉದ್ಘಾಟಿಸುವರು.

ಕಾಂಗ್ರೆಸ್ ಪಕ್ಷದ ಮಾಜಿ ಹಾಗೂ ಹಾಲಿ ಶಾಸಕರು, ಪಕ್ಷದ ಜಿಲ್ಲಾ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ, ಗ್ರಾಮ ಪಂಚಾಯತ, ಎಪಿಎಂಸಿ ಪಕ್ಷದ ಅಧ್ಯಕ್ಷರು ಹಾಗೂ ಸದಸ್ಯರು, ನಗರಸಭೆ, ಪಟ್ಟಣ ಪಂಚಾಯ್ತಿ, ಪುರಸಭೆ ಅಧ್ಯಕ್ಷರು ಹಾಗೂ ಸದಸ್ಯರು, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್ಸಿ–ಎಸ್ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ, ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೇತ್ ಮಜದೂರ ವಿಭಾಗ, ಮಾಜಿ ಸೈನಿಕರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವೀಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲಿಗಲ್ ರೀಫಾರ್ಮ್ಸ್ ವಿಭಾಗ, ಐಟಿ ಮತ್ತು ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ಇಲಾಖೆ ವಿಭಾಗದ ಅಧ್ಯಕ್ಷರು ಹಾಗೂ ಸದಸ್ಯರು, ಪಕ್ಷದ ಅಭಿಮಾನಿಗಳು ಕಾರ್ಯಕ್ರಮಕ್ಕೆ ಹಾಜರಾಗ ಬೇಕು ಎಂದು ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ವಿ.ಬಿ. ಸೋಮನಕಟ್ಟಿಮಠ, ಗದಗ–ಬೆಟಗೇರಿ ಶಹರ ಬ್ಲಾಕ್ ಕಾಂಗ್ರೆಸ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ವಿನಂತಿಸಿದ್ದಾರೆ.



ಕಾನೂನು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ಜವಳಿ ಹಾಗೂ ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ, ಮುಖ್ಯಸಚೇತಕ, ವಿಧಾನ ಪರಿಷತ್ ಸದಸ್ಯ ಸಲೀಂ ಅಹ್ಮದ್, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಬಿ.ಆರ್. ಯಾವಗಲ್, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ ಹಾಗೂ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸುಜಾತಾ ದೊಡ್ಡಮನಿ ಪಾಲ್ಗೊಳ್ಳುವರು.

### ಎಸ್.ಎಸ್.ಎಲ್.ಸಿ. ಪರೀಕ್ಷೆ ಕುರಿತು ಜರುಗಿದ ಸಭೆಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್

## ಅಚ್ಚುಕಟ್ಟಾಗಿ ಪರೀಕ್ಷೆ ಜರುಗಿಸಲು ಕ್ರಮ ವಹಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಮಾರ್ಚ್ 25ರಿಂದ ಏಪ್ರಿಲ್ 6ರವರೆಗೆ ಎಸ್.ಎಸ್.ಎಲ್.ಸಿ. ಪರೀಕ್ಷೆಗಳು ಜರುಗುತ್ತಿದ್ದು, ಪರೀಕ್ಷೆಗಳನ್ನು ವ್ಯವಸ್ಥಿತವಾಗಿ ಹಾಗೂ ಅಚ್ಚುಕಟ್ಟಾಗಿ ಜರುಗಿಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ತಿಳಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ಎಸ್.ಎಸ್.ಎಲ್.ಸಿ. ಪರೀಕ್ಷೆ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಎಸ್.ಎಸ್.ಎಲ್.ಸಿ. ಪರೀಕ್ಷೆಗಳನ್ನು ಪಾರದರ್ಶಕವಾಗಿ ನಡೆಸಬೇಕು. ಪರೀಕ್ಷೆಗಳಲ್ಲಿ ಯಾವುದೇ ಅಕ್ರಮಗಳು ನಡೆಯದಂತೆ ಹಾಗೂ ಲೋಪದೋಷಗಳಾಗದಂತೆ ಕ್ರಮ ವಹಿಸಬೇಕು. ಸಮಯ ಪರಿಪಾಲನೆಯು ಅತ್ಯವಶ್ಯವಾಗಿದ್ದು, ಪ್ರತಿಯೊಂದು ಪರೀಕ್ಷಾ ಕೇಂದ್ರಗಳಲ್ಲಿಯೂ ಗೋಡೆ ಗಡಿಯಾರ ಸುಸ್ಥಿತಿಯಲ್ಲಿರುವಂತೆ ನೋಡಿಕೊಳ್ಳಬೇಕು. ಪರೀಕ್ಷಾರ್ಥಿಗಳಿಗೆ ಸೂಕ್ತ ಆಸನದ ವ್ಯವಸ್ಥೆ ಇರುವಂತೆ ನೋಡಿಕೊಳ್ಳಬೇಕು. ಪರಿಣಾಮಕಾರಿ ವಿಚಕ್ಷಣ ಜಾಗೃತ ದಳಗಳನ್ನು ನೇಮಿಸಿ ಪರೀಕ್ಷಾ ಕಾರ್ಯ ಯಶಸ್ವಿಯಾಗಿ ನಡೆಯುವಂತೆ ಹಾಗೂ ಅವ್ಯವಹಾರಗಳು ನಡೆಯದಂತೆ ಕ್ರಮ ವಹಿಸಬೇಕೆಂದರು. ಪರೀಕ್ಷಾ ಕೇಂದ್ರಗಳ 200 ಮೀಟರ್ ಸುತ್ತಲೂ ನಿಷೇಧಾಜ್ಞೆ ಜಾರಿಗೊಳಿಸಲಾಗುವುದು. ಒಟ್ಟಾರೆಯಾಗಿ ಪರೀಕ್ಷೆಗಳು ಯಶಸ್ವಿಯಾಗಿ ಜರುಗುವಂತೆ ಕ್ರಮ ವಹಿಸಬೇಕೆಂದು ಸೂಚಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ಸಮಯಕ್ಕೆ ಸರಿಯಾಗಿ ಪರೀಕ್ಷಾ ಕೇಂದ್ರಗಳಿಗೆ ತೆರಳಲು ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಅಗತ್ಯ ಬಸ್ ವ್ಯವಸ್ಥೆಯನ್ನು ಕಲ್ಪಿಸಬೇಕು. ಪರೀಕ್ಷೆ ಬರೆಯುವ ವಿದ್ಯಾರ್ಥಿಗಳು ಹಾಗೂ ಪರೀಕ್ಷಾ ಕಾರ್ಯಕ್ಕೆ ನಿಯೋಜನೆಗೊಂಡ ಅಧಿಕಾರಿ–ಸಿಬ್ಬಂದಿಗಳನ್ನು ಹೊರತುಪಡಿಸಿ ಇನ್ನುಳಿದವರಿಗೆ ಪರೀಕ್ಷಾ ಕೇಂದ್ರಗಳಿಗೆ ಅವಕಾಶ ನೀಡಬಾರದು. ಪರೀಕ್ಷೆಗಳು ಶಾಂತಿಯುತವಾಗಿ ಹಾಗೂ ಸುಗಮವಾಗಿ ನಡೆಸುವುದಕ್ಕೆ ಸರ್ಕಾರದ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕೆಂದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ. ರಡ್ಡೇರ ಮಾತನಾಡಿ, ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆಗಳು ಮಾರ್ಚ್ 25ರಿಂದ ಏಪ್ರಿಲ್ 6ರವರೆಗೆ ಜರುಗಲಿವೆ. ಜಿಲ್ಲೆಯಲ್ಲಿ ಒಟ್ಟು 60 ಪರೀಕ್ಷಾ ಕೇಂದ್ರಗಳಿದ್ದು, 16325 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷೆಗಳನ್ನು ಶಾಂತಿಯುತವಾಗಿ ಹಾಗೂ ಸುವ್ಯವಸ್ಥಿತವಾಗಿ ಜರುಗಿಸಲು ಅಗತ್ಯ ಕ್ರಮ ವಹಿಸಲಾಗಿದೆ ಎಂದು ಸಭೆಗೆ ವಿವರಿಸಿದರು.

ಸಭೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರು, ಮಾರ್ಗಾಧಿಕಾರಿಗಳು, ಪೊಲೀಸ್ ಇಲಾಖೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.




**ಎಸ್.ಎಸ್.ಎಲ್.ಸಿ ಪರೀಕ್ಷೆ ವೇಳಾಪಟ್ಟಿ**

ಮಾರ್ಚ್ 25ರಂದು ಬೆಳಿಗ್ಗೆ 10.15ರಿಂದ ಮಧ್ಯಾಹ್ನ 1.30ರವರೆಗೆ ಪ್ರಥಮ ಭಾಷೆ, ಮಾರ್ಚ್ 27ರಂದು ಬೆಳಿಗ್ಗೆ 10.15ರಿಂದ 1.30ರವರೆಗೆ ಸಮಾಜ ವಿಜ್ಞಾನ, ಮಾರ್ಚ್ 30ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1.30 ರವರೆಗೆ ವಿಜ್ಞಾನ, ಎಪ್ರಿಲ್ 2ರಂದು ಬೆಳಿಗ್ಗೆ 10.30ರಿಂದ ಮಧ್ಯಾಹ್ನ 1.30ರವರೆಗೆ ಗಣಿತ, ಎಪ್ರಿಲ್ 3ರಂದು ಬೆಳಿಗ್ಗೆ 10.15ರಿಂದ ಮಧ್ಯಾಹ್ನ 1.30ರವರೆಗೆ ಅರ್ಥಶಾಸ್ತ್ರ, ಎಪ್ರಿಲ್ 4ರಂದು ಬೆಳಿಗ್ಗೆ 10.30ರಿಂದ ಮಧ್ಯಾಹ್ನ 1.30ರವರೆಗೆ ತೃತೀಯ ಭಾಷೆ, ಎಪ್ರಿಲ್ 6ರಂದು ಬೆಳಿಗ್ಗೆ 10.15ರಿಂದ ಮಧ್ಯಾಹ್ನ 1.15ರವರೆಗೆ ದ್ವಿತೀಯ ಭಾಷೆ ಪರೀಕ್ಷೆಗಳು ಜರುಗಲಿವೆ.

## ಸಂಪಾದಕೀಯ

### ಹೆಲ್ಮೆಟ್ ಧರಿಸಿ ಜೀವ ಉಳಿಸಿಕೊಳ್ಳಿ

ಬೆಳಗಾವಿ ಜಿಲ್ಲೆಯ ದೊಡವಾಡ ಪೊಲೀಸ್ ಠಾಣೆಯ ಎಎಸ್ಐ ಒಬ್ಬರು ಈಚೆಗೆ ಬೈಕ್ ಅಪಘಾತವೊಂದರಲ್ಲಿ ಮೃತಪಟ್ಟಿದ್ದರು. ಹೆಲ್ಮೆಟ್ ಧರಿಸಿದ್ದರೆ ಎಎಸ್ಐ ಬದುಕುಳಿಯುತ್ತಿದ್ದರು. ಕುಟುಂಬಕ್ಕೆ ಆಧಾರವಾಗುತ್ತಿದ್ದರು. ಇನ್ನಷ್ಟು ಸೇವೆ ಮಾಡುತ್ತಿದ್ದರು.

ಮೇಲ್ನೋಟಕ್ಕೆ ಇದೊಂದು ಸಾಮಾನ್ಯ ಅಪಘಾತ ಎಂದು ಕಂಡುಬಂದರೂ, ಹೆಲ್ಮೆಟ್ ಜಾಗೃತಿ ವಿಷಯದಲ್ಲಿ ನಿಷ್ಕಾಳಜಿ ತೋರಿರುವುದು ಸ್ಪಷ್ಟವಾಗಿದೆ. ಬೆಳಗಾವಿ ಎಸ್ ಪಿ ಈ ಪ್ರಕರಣವನ್ನ ಗಂಭೀರವಾಗಿ ಪರಿಗಣಿಸಿ, ದೊಡವಾಡ ಪೊಲೀಸ್ ಠಾಣೆಯ ಪಿಎಸ್ಐ ಅವರನ್ನೇ ಅಮಾನತು ಮಾಡಿ ಆದೇಶ ಹೊರಡಿಸಿದರು.

ಯಾವ ಪೊಲೀಸರು ಹೆಲ್ಮೆಟ್ ಬಗ್ಗೆ ಜಾಗೃತಿ ಕೈಗೊಳ್ಳುತ್ತಿದ್ದರು, ಅದೇ ಪೊಲೀಸರು ಹೆಲ್ಮೆಟ್ ಧರಿಸದ ಕಾರಣಕ್ಕೆ ಅಪಘಾತದಲ್ಲಿ ಪ್ರಾಣ ಕಳೆದುಕೊಂಡಿದ್ದು ಮಾತ್ರ ವಿಪರ್ಯಾಸ. ಈ ಪ್ರಕರಣದ ನಂತರ ಸಾರ್ವಜನಿಕರು ಎಷ್ಟರಮಟ್ಟಿಗೆ ಜಾಗೃತರಾದರೊ ಗೊತ್ತಿಲ್ಲ. ಆದರೆ ಪೊಲೀಸ್ ಇಲಾಖೆ ಈ ವಿಷಯವನ್ನ ಅತ್ಯಂತ ಗಂಭೀರವಾಗಿ ಪರಿಗಣಿಸದೆ.

ಎಡಿಜಿಪಿ ಅಲೋಕ್ ಕುಮಾರ್ ಅವರು, ಬೆಂಗಳೂರು ಸೇರಿದಂತೆ ರಾಜ್ಯಾದ್ಯಂತ ಎಲ್ಲ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ದ್ವಿಚಕ್ರ ವಾಹನ ಚಾಲನೆ ಮಾಡುವಾಗ ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು ಎನ್ನುವ ಆದೇಶವನ್ನು ಜಾರಿಗೊಳಿಸಿದ್ದಾರೆ.

ಪೊಲೀಸ್ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿ ಹೆಲ್ಮೆಟ್ ಮಹತ್ವವನ್ನು ಸಾಕಷ್ಟು ಅರಿತಿದ್ದಾರೆ. ಆದರೂ ಕೆಲವರು ಹೆಲ್ಮೆಟ್ ಧರಿಸದೆ ವಾಹನ ಚಲಾಯಿಸುತ್ತಾರೆ. ಇದನ್ನ ನೋಡಿದ ಜನಸಾಮಾನ್ಯರು, ಕಾನೂನು ಪಾಲನೆ ಮಾಡಬೇಕಾದ ಪೊಲೀಸರೇ ಹೆಲ್ಮೆಟ್ ಧರಿಸಿದೇ ವಾಹನ ಚಲಾಯಿಸುತ್ತಿರುವಾಗ ನಾವ್ಯಾಕೆ ಹೆಲ್ಮೆಟ್ ಹಾಕಬೇಕು ಎನ್ನುವ ಮನೋಭಾವ ತಾಳುತ್ತಿದ್ದಾರೆ.

ಇನ್ನು ನಗರ ಪ್ರದೇಶದಲ್ಲಿ ಟ್ರಾಫಿಕ್ ಪೊಲೀಸರ ತಂಡದ ಕಿರಿಕಿರಿಯನ್ನು ತಪ್ಪಿಸಿಕೊಳ್ಳಲು ಹೆಲ್ಮೆಟ್ ಹಾಕುತ್ತಾರೆ. ಪೊಲೀಸರು ಇಲ್ಲದ ಕಡೆಯಲ್ಲಿ ಹೆಲ್ಮೆಟ್ ತೆಗೆದಿರಿಸಿ ವಾಹನ ಓಡಿಸುವುದನ್ನ ನಾವೆಲ್ಲರೂ ಕಂಡಿದ್ದೇವೆ.

ಹೆಲ್ಮೆಟ್ ಒಂದು ಸಣ್ಣ ವಸ್ತು ಆದರೂ ಜೀವ ಉಳಿಸುವಂತಹ ಬಹುದೊಡ್ಡ ಕೆಲಸ ಮಾಡುತ್ತದೆ. ರಸ್ತೆ ಅಪಘಾತಗಳ ಪೈಕಿ ಶೇಕಡ 50ರಷ್ಟು ಪ್ರಕರಣಗಳಲ್ಲಿ ಹೆಲ್ಮೆಟ್ ಇಲ್ಲದಕ್ಕಾಗಿ ಜೀವ ಕಳೆದುಕೊಂಡಿರುವುದು ಸಮೀಕ್ಷೆ ಹೇಳುತ್ತದೆ. ಹೀಗಾಗಿ ಹೆಲ್ಮೆಟ್ ಧರಿಸುವುದನ್ನು ಕೇವಲ ದಂಡ ತಪ್ಪಿಸಿಕೊಳ್ಳುವುದಕಲ್ಲ, ನಮ್ಮ ಸುರಕ್ಷತೆಗೆ ಎನ್ನುವುದನ್ನು ಎಲ್ಲರೂ ಅರ್ಥಮಾಡಿಕೊಳ್ಳಬೇಕು ಮತ್ತು ಅದನ್ನು ಅಳವಡಿಸಿಕೊಳ್ಳಬೇಕು.

---

**ಒಟ್ಟು 78,488 ಪ್ರಕರಣಗಳ ರಾಜೀ ಸಂಧಾನ, ರೂ.19,66,43,493 ಮೊತ್ತ ವಸೂಲು**

# ಯಶಸ್ವಿಯಾದ ರಾಷ್ಟ್ರೀಯ ಲೋಕ ಅದಾಲತ್

■ವಿಜಯಸಾಕ್ಷಿ ಸುದ್ದಿ, ಧಾರವಾಡ

ರಾಷ್ಟ್ರೀಯ ಲೋಕ್ ಅದಾಲತ್‌ನ್ನು ಧಾರವಾಡ ಜಿಲ್ಲೆಯ ಎಲ್ಲ ನ್ಯಾಯಾಲಯಗಳಲ್ಲಿ ಆಯೋಜಿಸಲಾಗಿತ್ತು. ಲೋಕ್ ಅದಾಲತ್‌ನಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಅಧ್ಯಕ್ಷರಾದ ಕೆ.ಜಿ. ಶಾಂತಿ ಅವರ ಮಾರ್ಗದರ್ಶನದಲ್ಲಿ ಧಾರವಾಡದಲ್ಲಿ-13 ಪೀಠಗಳನ್ನು, ಹುಬ್ಬಳ್ಳಿಯಲ್ಲಿ-18 ಪೀಠಗಳನ್ನು, ಕುಂದಗೋಳ-2, ನವಲಗುಂದ-2 ಮತ್ತು ಕಲಘಟಗಿಯಲ್ಲಿ-2 ಹೀಗೆ ಒಟ್ಟು 37 ಪೀಠಗಳನ್ನು ಸ್ಥಾಪಿಸಲಾಗಿತ್ತು.

ಧಾರವಾಡದ ಕೌಟುಂಬಿಕ ನ್ಯಾಯಾಲಯದ ಪೀಠಾಧೀಶರಾದ ಸುವರ್ಣ ಮಿರ್ಜಿ ಮತ್ತು ಸಂಧಾನಕಾರರಾದ ಪುಷ್ಪಾ ಪಾಟೀಲ ಅವರನ್ನೊಳಗೊಂಡ ಲೋಕ್ ಅದಾಲತ್ ಪೀಠದ ಬೈಠಕ್‌ನಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಅಧ್ಯಕ್ಷರಾದ ಕೆ.ಜಿ. ಶಾಂತಿ ಅವರು ಭಾಗವಹಿಸಿ 2 ಜೋಡಿ ಸತಿ-ಪತಿಗಳನ್ನು ಒಂದಾಗಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಹುಬ್ಬಳ್ಳಿಯ ಪ್ರಧಾನ ಕೌಟುಂಬಿಕ ನ್ಯಾಯಾಲಯದ ಪೀಠಾಧೀಶರಾದ ಇಂದಿರಾ ಚೆಟ್ಟಿಯಾರ್ ಮತ್ತು ಸಂಧಾನಕಾರರಾದ ಸವಿತಾ ಪಾಟೀಲ ಇವರನ್ನೊಳಗೊಂಡ ಲೋಕ್ ಅದಾಲತ್ ಪೀಠದ ಬೈಠಕ್‌ನಲ್ಲಿ 8 ಜೋಡಿ ಸತಿ-ಪತಿಗಳನ್ನು ಒಂದಾಗಿಸುವಲ್ಲಿ ಯಶಸ್ವಿಯಾಗಿದ್ದಾರೆ. ಅಧಿಕ ಕೌಟುಂಬಿಕ ನ್ಯಾಯಾಲಯದ ಪೀಠಾಧೀಶ ರವಿ ಅರಿ ಮತ್ತು ಪರಶುರಾಮಗೌಡರ್ ಇವರನ್ನೊಳಗೊಂಡ ಲೋಕ್ ಅದಾಲತ್ ಪೀಠದ ಬೈಠಕ್‌ನಲ್ಲಿ 6 ಜೋಡಿ ಸತಿ-ಪತಿಗಳನ್ನು ಒಂದಾಗಿಸುವಲ್ಲಿ ಯಶಸ್ವಿಯಾಗಿದ್ದಾರೆ. ಕುಂದಗೋಳದ ಹಿರಿಯ ಸಿವಿಲ್ ನ್ಯಾಯಾಧೀಶ ಪಿ.ಜೆ. ಪರಮೇಶ್ವರ ಮತ್ತು ನ್ಯಾಯವಾದಿ ಸಂಧಾನಕಾರ ವಿನಾಯಕ ಹಡಪದ ಒಂದು ಕೌಟುಂಬಿಕ ವ್ಯಾಜ್ಯಗಳನ್ನು ಬಗೆಹರಿಸಿದ್ದು, ಧಾರವಾಡ ಜಿಲ್ಲೆಯ ಒಟ್ಟು 17 ಜೋಡಿ ದಂಪತಿಗಳನ್ನು ಒಂದಾಗಿಸುವಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ಯಶಸ್ವಿಯಾಗಿದೆ.



ವಿವಿಧ ರೀತಿಯ ಹಾಗೂ ವಿವಿಧ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಬಾಕಿ ಇದ್ದ, ರಾಜೀ ಆಗಬಹುದಾದಂತಹ 17,995 ಪ್ರಕರಣಗಳನ್ನು ತೆಗೆದುಕೊಂಡು ಅವುಗಳ ಪೈಕಿ 13,284 ಪ್ರಕರಣಗಳನ್ನು ಹಾಗೂ 66,677 ವ್ಯಾಜ್ಯ ಪೂರ್ವ ಪ್ರಕರಣಗಳನ್ನು ತೆಗೆದುಕೊಂಡು ಅವುಗಳ ಪೈಕಿ 66,296 ಪ್ರಕರಣಗಳನ್ನು ಸೇರಿ ಒಟ್ಟು 78,488 ರಾಜೀ ಸಂಧಾನ ಮಾಡಿಸಿ, ಒಟ್ಟು ರೂ.19,66,43,493 ಮೊತ್ತವನ್ನು ವಸೂಲು ಮಾಡಲಾಗಿದೆ.

ಧಾರವಾಡದ ಪ್ರಧಾನ ಹಿರಿಯ ಸಿವಿಲ್ ಮತ್ತು ಸಿ.ಜೆ.ಎಮ್. ನ್ಯಾಯಾಧೀಶ ಸಂಜಯ ಪಿ. ಗುಡಗುಡಿ ಮತ್ತು ಸಂಧಾನಕಾರ ಪ್ರಕಾಶ ರಟಗೇರಿ ಇವರನ್ನೊಳಗೊಂಡ ಲೋಕ್ ಅದಾಲತ್ ಪೀಠದ ಬೈಠಕನಲಿ ಮೋಟಾರು ವಾಹನ ಅಪಘಾತ ಪ್ರಕರಣದಲ್ಲಿ ವಿಮಾ ಕಂಪನಿ ಮೃತನ ವಾರಸುದಾರರಾದ ಅರ್ಜಿದಾರರಿಗೆ 2 ಕೋಟಿ ರೂಪಾಯಿಗಳ ಪರಿಹಾರವನ್ನು ನೀಡಲು ಒಪ್ಪಿ ರಾಜಿ ಮಾಡಲಾಗಿದೆ.

ಹುಬ್ಬಳ್ಳಿಯ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶ ಆರ್.ಎಸ್. ಚಿನ್ನಣ್ಣವರ ಅವರ ನ್ಯಾಯಾಲಯದಲ್ಲಿ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಡಾ. ಆರ್.ಬಿ. ಪಾಟೀಲ ಅವರು ತಮ್ಮ ಕುಟುಂಬದವರೊಂದಿಗೆ ರಾಜಿ ಮಾಡಿಕೊಂಡಿದ್ದು, ಅದರಲ್ಲಿ 82 ವರ್ಷದ ಅವರ ತಾಯಿ ಸಹ ಪಾಲ್ಗೊಂಡಿದ್ದರು. ಪ್ರಕರಣದಲ್ಲಿ ಎಲ್ಲರೂ ಸಂತೋಷದಿಂದ ತಮ್ಮ ಪ್ರಕರಣವನ್ನು ಇತ್ಯರ್ಥ ಪಡಿಸಿಕೊಂಡರು.

ಹುಬ್ಬಳ್ಳಿಯ ಔದ್ಯಮಿಕ ನ್ಯಾಯಮಂಡಳಿಯಲ್ಲಿ ನಡೆದ ಲೋಕಅದಾಲತನಲ್ಲಿ ರಾಜಿಯಾದ ಪ್ರಕರಣಗಳಲ್ಲಿ 200 ಜನ ಉದ್ಯೋಗಿಗಳನ್ನು ಧಾರವಾಡದ ಟಾಟಾ ಮಾರ್ಕೋಪೋಲೊ ಮೋಟಾರ್ಸ್ ಪ್ರೈ.ಲಿ. ಕಂಪನಿಯು ಪುನಃ ಕೆಲಸಕ್ಕೆ ಸೇರಿಸಿಕೊಂಡಿದೆ.

ಲೋಕ್ ಅದಾಲತ್‌ನಲ್ಲಿ ಧಾರವಾಡ ಜಿಲ್ಲೆಯ ಎಲ್ಲ ನ್ಯಾಯಾಧೀಶರು, ವಕೀಲರ ಸಂಘಗಳು, ವಿವಿಧ ವಿಮೆ ಕಂಪನಿಯ ಅಧಿಕಾರಿಗಳು, ವಿಮೆ ಕಂಪನಿಯ ಪ್ಯಾನಲ್ ವಕೀಲರು, ಅರ್ಜಿದಾರರ ಪರ ವಕೀಲರು, ಕಂದಾಯದ ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳು ಮತ್ತು ಕಕ್ಷಿದಾರರು ಭಾಗವಹಿಸಿ ಲೋಕ್ ಅದಾಲತ್‌ನ್ನು ಯಶಸ್ವಿಗೊಳಿಸಿದ್ದಾರೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿ ಪರಶುರಾಮ ಎಫ್. ದೊಡ್ಡಮನಿ ತಿಳಿಸಿದ್ದಾರೆ.

---

## ರಾಜ್ಯಮಟ್ಟದ ಪುರುಷರ ವಾಲಿಬಾಲ್ ಪಂದ್ಯಾವಳಿ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಕ್ರೀಡೆಗಳು ಜೀವನದ ಉತ್ತಮ ಸ್ಥಿತಿಯನ್ನು ನಿರ್ಮಾಣ ಮಾಡಲು ಸಹಾಯ ಮಾಡುತ್ತವೆ. ಗ್ರಾಮೀಣ ಭಾಗಗಳಲ್ಲಿ ಇಂತಹ ದೇಸೀ ಕ್ರೀಡೆಗಳನ್ನು ಆಯೋಜಿಸಿ ಕ್ರೀಡಾಪಟುಗಳಿಗೆ ವೇದಿಕೆ ಕಲ್ಪಿಸುತ್ತಿರುವುದು ಶ್ಲಾಘನೀಯ ಕಾರ್ಯ ಎಂದು ಬನ್ನಿಕೊಪ್ಪದ ಡಾ. ಸುಜ್ಞಾನದೇವ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಅವರು ಶಿರಹಟ್ಟಿ ತಾಲೂಕಿನ ಬನ್ನಿಕೊಪ್ಪ ಗ್ರಾಮದಲ್ಲಿ ದಿ. ಹನುಮಂತ ದೇವಪ್ಪ ವಡ್ಡಟ್ಟಿ ಇವರ ಸ್ಮರಣಾರ್ಥ ಏರ್ಪಡಿಸಿದ ರಾಜ್ಯಮಟ್ಟದ ಪುರುಷರ ಮುಕ್ತ ವಾಲಿಬಾಲ್ ಪಂದ್ಯಾವಳಿಯ ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ಒಬ್ಬ ವ್ಯಕ್ತಿ ಜೀವನದಲ್ಲಿ ಉತ್ತಮವಾಗಿ ಬದುಕಲು ಕ್ರೀಡೆಗಳು ಸಹಕಾರಿಯಾಗಲಿವೆ. ನಮ್ಮ ಗ್ರಾಮದಲ್ಲಿ ಅನೇಕ ವರ್ಷಗಳಿಂದ ಕ್ರೀಡೆಗಳು ನಡೆಯುತ್ತಾ ಬಂದಿದ್ದು, ಇದಕ್ಕೆ ಅನೇಕ ದಾನಿಗಳು ನಿರಂತರವಾಗಿ ಸಹಕಾರ ನೀಡುತ್ತಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಗ್ರಾಮದ ಗುರು ಹಿರಿಯರು, ಗೆಳೆಯರ ಬಳಗ, ಗ್ರಾ.ಪಂ ಸದಸ್ಯರು ಉಪಸ್ಥಿತರಿದ್ದರು.

---

**ಗದಗ ಐಎಂಎದಿಂದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ**

# ಸ್ತ್ರೀಯರು ಎಲ್ಲ ಕ್ಷೇತ್ರದಲ್ಲೂ ಸಾಧಕರಾಗಿದ್ದಾರೆ

■ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ಆಧುನಿಕ ದಿನಗಳಲ್ಲಿ ಮಹಿಳೆಯರಲ್ಲಿ ಸ್ಪರ್ಧಾ ಮನೋಭಾವ, ಶಿಕ್ಷಣ ಪಾಂಡಿತ್ಯದಿಂದಾಗಿ ಎಲ್ಲ ಕ್ಷೇತ್ರದಲ್ಲೂ ಗಟ್ಟಿ ನೆಲೆ ಕಂಡುಕೊಳ್ಳಲು ಸಾಧ್ಯವಾಗಿದೆ ಎಂದು ರಾಜ್ಯ ಐಎಂಎ ನಿಕಟಪೂರ್ವ ಅಧ್ಯಕ್ಷ, ಗದುಗಿನ ತಜ್ಞ ವೈದ್ಯ ಡಾ.ರಾಜಶೇಖರ ಬಳ್ಳಾರಿ ಅಭಿಪ್ರಾಯಪಟ್ಟರು.

ಅವರು ಗದಗ ಐಎಂಎ ಸಭಾಂಗಣದಲ್ಲಿ ಭಾರತೀಯ ವೈದ್ಯಕೀಯ ಸಂಘದ ಗದಗ ಶಾಖೆ ಏರ್ಪಡಿಸಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮಹಿಳೆಯರ ಸ್ಥಾನಮಾನ ಉತ್ತಮಪಡಿಸುವಿಕೆ, ಸಾಮಾಜಿಕ ಬೆಳವಣಿಗೆಗೆ ಅಗತ್ಯತೆಯ ಸಮಾನತೆ ಕಲ್ಪಿಸುವುದು ಇಂದಿನ ಅಗತ್ಯತೆಯಾಗಿದೆ. ಕೌಟುಂಬಿಕ ಹಾಗೂ ಸಾಮಾಜಿಕ ಹಲವಾರು ಕಟ್ಟುಪಾಡುಗಳ ಮಧ್ಯದಲ್ಲಿಯೂ ಶೈಕ್ಷಣಿಕ ಅರ್ಹತೆ, ಪರಿಣಿತಿಯನ್ನು ಹೊಂದುವ ಮೂಲಕ ಮಹಿಳೆ ದಿಟ್ಟತನದ ಹೆಜ್ಜೆಯನ್ನಿಟ್ಟು ಮುನ್ನಡೆ ಸಾಧಿಸುತ್ತಿರುವದು ಶ್ಲಾಘನೀಯ ಎಂದರು.

ಕುಟುಂಬದಲ್ಲಿ ಪಾಲಕ-ಪೋಷಕರು, ಪತಿಯ ಮನೆಯಿಂದ ಸಮಾನತೆಯೊಂದಿಗೆ ಸಹಕಾರ, ಪ್ರೋತ್ಸಾಹ ದೊರೆತಾಗ, ಅವಳಿಗೆ ಪೂರ್ಣ ಪ್ರಮಾಣದ ಸ್ವಾತಂತ್ರ್ಯ ಕೊಟ್ಟಾಗ ಮಾತ್ರ ಮಹಿಳೆಯ ಸಾಧನೆಯ ಛಲದ ಬದುಕು ಸುಗಮವಾಗಲು ಸಾಧ್ಯ ಎಂದರು.



ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಭಾರತೀಯ ವೈದ್ಯಕೀಯ ಸಂಘ ಗದಗ ಶಾಖೆಯ ಅಧ್ಯಕ್ಷ ಜಿ.ಎಸ್. ಪಲ್ಲೇದ, ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ದಿನದಂದು ಮಾತ್ರ ಮಹಿಳೆಯರು ಮತ್ತು ಮಹಿಳೆಯರ ಸ್ಥಾನಮಾನದ ಬಗ್ಗೆ ಮಾತನಾಡುವ ಬದಲು, ನಿತ್ಯದ ಬದುಕಿನಲ್ಲಿ ಮಹಿಳಾ ಅಭಿವೃದ್ಧಿಗೆ ಪೂರಕವಾದ ಕಾರ್ಯ ನಡೆಯುವಂತಾಗಬೇಕು ಎಂದರು.

ಸಮಾರಂಭದಲ್ಲಿ ವಿವಿಧ ಕ್ಷೇತ್ರದಲ್ಲಿ ಗಣನೀಯ ಸಾಧನೆಗೈದ 30 ಸಾಧಕ ಮಹಿಳೆಯರಿಗೆ ಸನ್ಮಾನಿಸಿ ಗೌರವಿಸಲಾಯಿತು. ಆರ್ಥಿಕವಾಗಿ ಹಿಂದುಳಿದ ಸುಮಾರು 150ಕ್ಕೂ ಹೆಚ್ಚಿನ ವಿದ್ಯಾರ್ಥಿಗಳಿಗೆ ಸುಮಾರು 40 ಸಾವಿರ ರೂ. ಮೌಲ್ಯದ ' ಕನ್ನಡಗಳನ್ನು ಉಡುಗೊರೆಯಾಗಿ ನೀಡಲಾಯಿತು. ವೇದಿಕೆಯ ಮೇಲೆ ಗದಗ ಐಎಂಎ ಮಾಜಿ ಅಧ್ಯಕ್ಷ ಡಾ.ಪ್ಯಾರಅಲಿ ನೂರಾನಿ ಉಪಸ್ಥಿತರಿದ್ದರು.

ಡಾ. ಜಿ.ಎಸ್. ಪಲ್ಲೇದ ಸ್ವಾಗತಿಸಿದರು. ಐಎಂಎ ಕಾರ್ಯದರ್ಶಿ ಡಾ.ಚಂದ್ರಶೇಖರ ಬಳ್ಳಾರಿ ನಿರೂಪಿಸಿದರು. ಐಎಂಎ ಮಹಿಳಾ ಘಟಕದ ಕಾರ್ಯದರ್ಶಿ ಡಾ.ರಾಧಿಕಾ ಬಳ್ಳಾರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಹಿಳಾ ಘಟಕದ ಅಧ್ಯಕ್ಷೆ ಡಾ.ಸೋನಿಯಾ ಕರೂರ ವಂದಿಸಿದರು.

ಡಾ.ಬಸವರಾಜ ಆಲೂರ, ಡಾ.ಶೇಖರ ಸಜ್ಜನರ, ಡಾ. ವ್ಹಿ.ಎಸ್. ಹೊಸಮಠ, ಡಾ. ಜಿ.ಬಿ. ಬಿಡಿನಹಾಳ, ಡಾ.ಅನುಪಮಾ ಪಾಟೀಲ, ಡಾ.ಸುನೀತಾ ಕುರಡಗಿ, ಶೈನಾಜಬೇಗಂ ಮಹ್ಮದಗೌಸ್ ನೆಗಳೂರ ಮುಂತಾದವರಿದ್ದರು.

---

**ಕೊಪ್ಪಳ ವಿಶ್ವವಿದ್ಯಾಲಯದಲ್ಲಿ ಪ್ರಥಮ ಸಂಸ್ಥಾಪನಾ ದಿನಾಚರಣೆ**

# ಕೊಪ್ಪಳವು ಚಾರಿತ್ರಿಕ ಹಿನ್ನೆಲೆ ಹೊಂದಿದೆ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಕೊಪ್ಪಳ ಕನ್ನಡ ನಾಡಿಗೆ ವಿಶೇಷ ನೆರವಾಗಿದೆ. ಇಲ್ಲಿನ ಸಾಮ್ರಾಟ್ ಅಶೋಕನ ಮೂಲಕ ರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಂಡಿದೆ. ಕೊಪ್ಪಳವು ಚಾರಿತ್ರಿಕ ಹಿನ್ನೆಲೆಯನ್ನೂ ಹೊಂದಿದೆ ಎಂದು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಕೆ.ಎಮ್. ಮೇತ್ರಿ ಅಭಿಪ್ರಾಯಪಟ್ಟರು.

ಕೊಪ್ಪಳ ವಿಶ್ವವಿದ್ಯಾಲಯದಲ್ಲಿ ನಡೆದ ಪ್ರಥಮ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮಕ್ಕೆ ಜ್ಯೋತಿ ಬೆಳಗಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಗದುಗಿನ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ವಿಷ್ಣುಕಾಂತ್ ಎಸ್. ಚಟಪಲ್ಲಿ ಮಾತನಾಡಿ, ಕೊಪ್ಪಳ ವಿಶ್ವವಿದ್ಯಾಲಯದಿಂದ ಗ್ರಾಮೀಣ ಪ್ರದೇಶದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಸಿಗುವಂತಾಗಲಿ ಎಂದರು.



ಗೊಟಗೋಡಿ, ಶಿಗ್ಗಾಂವಿಯ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಟಿ.ಎಂ. ಭಾಸ್ಕರ್ ಮಾತನಾಡಿ, ಸಂವಿಧಾನ ಆಶಯವನ್ನು ಜಾರಿಗೆ ತರುವ ಕೆಲಸವಾಗಬೇಕು. ಸಂವಿಧಾನ ಆಶಯದಂತೆ ನಾವೆಲ್ಲರೂ ನಡೆಯೋಣ ಎಂದರು.

ಹಾವೇರಿ ವಿಶ್ವ ವಿದ್ಯಾಲಯದ ಕುಲಪತಿ ಪ್ರೊ. ಸುರೇಶ ಎಚ್. ಜಂಗಮಶೆಟ್ಟಿ, ಬೀದರ ವಿವಿ ಕುಲಪತಿ ಪ್ರೊ. ಬಿ.ಎಸ್. ಬಿರಾದಾರ, ಕೊಡಗು ವಿವಿ ಕುಲಪತಿ ಪ್ರೊ. ಅಶೋಕ ಸಂಗಪ್ಪ ಆಲೂರು, ಹಾಸನ ವಿವಿ ಕುಲಪತಿ ಪ್ರೊ. ತರೀಕೆರಿ ಸಿ.ತಾರಾನಾಥ, ಚಾಮರಾಜನಗರ ವಿವಿ ಕುಲಪತಿ ಪ್ರೊ. ಎಮ್.ಆರ್. ಗಂಗಾಧರ್, ವಿಜಯನಗರ ಶ್ರೀಕೃಷ್ಣದೇವರಾಯ ವಿವಿ ಕುಲಸಚಿವ ಎಸ್.ಎನ್. ರುದ್ರೇಶ ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕೊಪ್ಪಳ ವಿವಿ ಕುಲಪತಿ ಪ್ರೊ. ಬಿ.ಕೆ. ರವಿ ಬಹಿಸಿ ಮಾತನಾಡಿದರು. ಕುಲ ಸಚಿವ ಡಾ. ಕೆ.ವಿ. ಪ್ರಸಾದ್, ಸ್ನಾತಕೋತ್ತರ ಕೇಂದ್ರದ ನಿರ್ದೇಶಕರಾದ ಡಾ. ಸಿ.ಐ. ಚಲವಾದಿ, ಡಾ.ಪ್ರಕಾಶ ಯಳವಟ್ಟಿ, ಡಾ. ಬಾಜಿ ದೇವೇಂದ್ರಪ್ಪ, ವಿವಿ ವ್ಯಾಪ್ತಿಯ ಕಾಲೇಜಿನ ಪ್ರಾಚಾರ್ಯರು, ಪ್ರಾಧ್ಯಾಪಕರು, ಭೋಧಕ, ಬೋಧಕೇತರ ಸಿಬ್ಬಂದಿಗಳು, ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು ಇದ್ದರು.

ವರ್ಷಿಣಿ ಸಂಗಡಿಗರು ನಾಡಗೀತೆ ಹಾಗೂ ಪ್ರಾರ್ಥನೆ ಹಾಡಿದರು. ಕನ್ನಡ ವಿಭಾಗದ ಉಪನ್ಯಾಸಕ ವೀರೇಶ ಉತ್ತಂಗಿ ಮತ್ತು ಇತಿಹಾಸ ವಿಭಾಗದ ಉಪನ್ಯಾಸಕಿ ಗೀತಾ ಪಾಟೀಲ್ ನಿರೂಪಣೆ ಮಾಡಿದರು.

---

## ಯೋಗ ಸೈನ್ಸ್ ತರಬೇತಿಯ ಪ್ರಾರಂಭೋತ್ಸವ



■ವಿಜಯಸಾಕ್ಷಿ ಸುದ್ದಿ, ಹುಲಕೋಟಿ

ಎಲೆಮರೆಯ ಕಾಯಿಯಂತೆ ಸಮಾಜ ಸೇವೆ ಮಾಡುವ ಉತ್ತಮ ಶುಶ್ರೂಷಕರಾಗುವುದರೊಂದಿಗೆ ವೈಯಕ್ತಿಕವಾಗಿಯೂ ಸದೃಢತೆಯನ್ನು ಹೊಂದಿ ಆರೋಗ್ಯಪೂರ್ಣರಾಗಿದ್ದಲ್ಲಿ ನಿಮ್ಮಿಂದ ಸೇವೆ ಪಡೆಯುವ ಪ್ರತಿಯೊಬ್ಬರೂ ಶೀಘ್ರವಾಗಿ ರೋಗಮುಕ್ತರಾಗುತ್ತಾರೆ. ರಾಷ್ಟ್ರಮಟ್ಟದಲ್ಲಿ ಸಾಧನೆಗೈದಿರುವ ಡಾ. ಸತೀಶ್ ಹೊಂಬಾಳೆ ಅವರ ಮಾರ್ಗದರ್ಶನದಿಂದ ಸುದೈವಿಗಳಾದ ನೀವು ಉತ್ತಮ ರೀತಿಯಲ್ಲಿ ಯೋಗಾಭ್ಯಾಸ ಮಾಡಿ ಎಂದು ಸಚಿವ ಡಾ. ಎಚ್.ಕೆ. ಪಾಟೀಲ ಆಶಿಸಿದರು.

ಇತ್ತೀಚೆಗೆ ಇಲ್ಲಿನ ಕೆ.ಎಚ್. ಪಾಟೀಲ್ ಇನ್ಸ್ಟಿಟ್ಯೂಟ್ ಆಫ್ ನ್ಯಾಚುರೋಪತಿ & ಯೋಗಿಕ್ ಸೈನ್ಸಸ್ ಹುಲಕೋಟಿ-ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡದ ಸಹಯೋಗದಲ್ಲಿ ಸರ್ಟಿಫಿಕೇಟ್ ಕೋರ್ಸ್ ಇನ್ ಯೋಗಾ ಸೈನ್ಸ್ ತರಬೇತಿಯ ಪ್ರಾರಂಭೋತ್ಸವವನ್ನು ಆರ್‌ಎಮ್‌ಎಸ್‌ಎಸ್ ಇನ್ಸ್ಟಿಟ್ಯೂಟ್ ಆಫ್ ನರ್ಸಿಂಗ್ ಸೈನ್ಸಸ್‌ನ ವಿದ್ಯಾರ್ಥಿಗಳ ಸಮ್ಮುಖದಲ್ಲಿ ಉದ್ಘಾಟಿಸಿ ಅವರು ಮಾತನಾಡಿದರು.

ಡಿ.ಆರ್. ಪಾಟೀಲ ಮಾತನಾಡಿ, ಹುಲಕೋಟಿಯ ವಾತಾವರಣದಲ್ಲಿ ಯೋಗಾಭ್ಯಾಸ ತರಬೇತಿಯನ್ನು ಪಡೆದುಕೊಂಡು ಉತ್ತಮ ಆರೋಗ್ಯವನ್ನು ನಿಮ್ಮದಾಗಿಸಿಕೊಳ್ಳಿ ಎಂದು ಹೇಳಿದರು. ಆರ್‌ಎಮ್‌ಎಸ್‌ಎಸ್ ಇನ್ಸ್ಟಿಟ್ಯೂಟ್ ಆಫ್ ನರ್ಸಿಂಗ್ ಸೈನ್ಸಸ್‌ನ ಅಧ್ಯಕ್ಷ ಡಾ. ಎಸ್. ಆರ್. ನಾಗನೂರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಯೋಗ ತರಬೇತುದಾರ ಪ್ರಭು ಬುರ್ಬುರೆ ಉಪಸ್ಥಿತರಿದ್ದರು. ಇನ್ಸ್ಟಿಟ್ಯೂಟ್‌ನ ಪ್ರಾಂಶುಪಾಲ ಬಸಯ್ಯ ಹಿರೇಮಠ ಕಾರ್ಯಕ್ರಮವನ್ನು ನಿರ್ವಹಿಸಿದರು.

---

## ಹೆಡ್‌ಕಾನ್ಸ್‌ಟೇಬಲ್ ಮೇಲೆ ಹಲ್ಲೆ, ರೌಡಿ ಶೀಟರ್ ಕಾಲಿಗೆ ಗುಂಡು ಹಾರಿಸಿದ ಪೊಲೀಸರು!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸ್ಥಳ ಮಹಜರು ವೇಳೆ ಪೊಲೀಸರ ಮೇಲೆ ಹಲ್ಲೆ ನಡೆಸಿದ ಆರೋಪದ ಮೇರೆಗೆ ಕಗ್ಗಲೀಪುರ ಪೊಲೀಸರು 50 ವರ್ಷದ ಕೊಲೆ ಆರೋಪಿಯ ಕಾಲಿಗೆ ಗುಂಡು ಹಾರಿಸಿದ್ದಾರೆ.

ಜೆ.ಪಿ.ನಗರ 1ನೇ ಹಂತದ ಸಾರಕ್ಕಿ ನಿವಾಸಿ ಎಸ್.ಸೋಮೇಶ ಬಂಧಿತ ಆರೋಪಿ. ಈತ ಜೆ.ಪಿ.ನಗರ ಪೊಲೀಸ್ ಠಾಣೆಯಲ್ಲಿ ರೌಡಿ ಶೀಟರ್ ಆಗಿದ್ದಾನೆ.

ಕಳೆದ ವರ್ಷ ಡಿಸೆಂಬರ್‌ನಲ್ಲಿ ತನ್ನ ಆತ್ಮೀಯ ಸ್ನೇಹಿತನನ್ನು ಕೊಂದು ಉತ್ತರ ಪ್ರದೇಶದಲ್ಲಿ ತಲೆಮರೆಸಿಕೊಂಡಿದ್ದ ಸೋಮೇಶನನ್ನು ಖಚಿತ ಮಾಹಿತಿಯ ಮೇರೆಗೆ ಉತ್ತರ ಪ್ರದೇಶದ ಲಖನೌದಲ್ಲಿ ಬಂಧಿಸಿದ ಪೊಲೀಸರು, ಶನಿವಾರ ಮುಂಜಾನೆ ಕಗ್ಗಲಿಪುರ ಠಾಣೆಗೆ ಕರೆತಂದಿದ್ದಾರೆ.

---

## ನೇಮಕ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭಾರತೀಯ ಜನತಾ ಪಾರ್ಟಿಯ ಲಕ್ಷ್ಮೇಶ್ವರ ನಗರ ಘಟಕದ ಅಧ್ಯಕ್ಷರಾಗಿ ನವೀನ ಬೆಳ್ಳಟ್ಟಿ ಅವರನ್ನು ನೇಮಕ ಮಾಡಿ ಆದೇಶ ಹೊರಡಿಸಲಾಗಿದೆ.

## ತಾಲೂಕಿನಲ್ಲಿ 3 ಕಡೆ ಚೆಕ್‌ಪೋಸ್ಟ್ ಸ್ಥಾಪನೆ

■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಲೋಕಸಭಾ ಚುನಾವಣೆಯ ನಿಮಿತ್ತ ನೀತಿ ಸಂಹಿತೆ ಜಾರಿಯಾದ ಹಿನ್ನೆಲೆಯಲ್ಲಿ ತಾಲೂಕಾಡಳಿತದಿಂದ ತಾಲೂಕಿನ ವಿವಿಧೆಡೆ 3 ಚೆಕ್‌ಪೋಸ್ಟ್‌ಗಳನ್ನು ಸ್ಥಾಪನೆ ಮಾಡಲಾಗಿದೆ. ನಂದಿಬೇವೂರು, ಕೂಲಹಳ್ಳಿ, ಮತ್ತೆಹಳ್ಳಿ ಗ್ರಾಮಗಳ ಬಳಿ ಚೆಕ್‌ಪೋಸ್ಟ್ ಸ್ಥಾಪಿಸಲು ಕ್ರಮವನ್ನು ಕೈಗೊಂಡಿದ್ದೇವೆ ಎಂದು ಸಹಾಯಕ ಚುನಾವಣಾಧಿಕಾರಿ ಎ.ಸಿ ಚಿದಾನಂದ ಗುರುಸ್ವಾಮಿ ತಿಳಿಸಿದರು.

ಈ ಬಗ್ಗೆ ಮಾಧ್ಯಮ ಪ್ರತಿನಿಧಿಗಳೊಂದಿಗೆ ಭಾನುವಾರ ಮಾತನಾಡಿದ ಅವರು, ಯಾವುದೇ ವ್ಯಕ್ತಿಯಾಗಲಿ, ವಾಹನಗಳಾಗಲಿ 50 ಸಾವಿರ ರೂ. ಅಥವಾ ಅದಕ್ಕಿಂತ ಹೆಚ್ಚಿನ ಹಣ ತೆಗೆದುಕೊಂಡು ಹೋಗುತ್ತಿದ್ದರೆ ಅದಕ್ಕೆ ಸೂಕ್ತ ದಾಖಲೆ ನೀಡಬೇಕಾಗುತ್ತದೆ ಎಂದು ಹೇಳಿದರು.

ಹರಪನಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ 253 ಮತಗಟ್ಟೆಗಳನ್ನು ಸ್ಥಾಪನೆ ಮಾಡಲಾಗಿದೆ. ಅದರಲ್ಲಿ 70 ಸೂಕ್ಷ್ಮ ಮತಗಟ್ಟೆಗಳೆಂದು ಗುರುತಿಸಲಾಗಿದೆ. 2,21851 ಮತದಾರರಿದ್ದು, ನಾಮಪತ್ರ ಸಲ್ಲಿಸಲು ಒಂದು ವಾರ ಇರುವವರೆಗೂ ಮತದಾರರ ಪಟ್ಟಿಯಲ್ಲಿ ಹೆಸರುಗಳನ್ನು ನೋಂದಾಯಿಸಬಹುದು ಎಂದು ತಿಳಿಸಿದರು.

85 ವರ್ಷ ವಯಸ್ಸಾದ ಹಿರಿಯ ನಾಗರಿಕರಿಗೆ, ಶೇ.40 ವಿಕಲಚೇತನದಾರರಿಗೆ ಅವರು ಬಯಸಿದರೆ ಮತ ಚಲಾಯಿಸಲು ಮತಪತ್ರವನ್ನು ಅವರವರ ನಿವಾಸಕ್ಕೆ ಸಿಬ್ಬಂದಿ ಮೂಲಕ ಕಳಿಸಲಾಗುವುದು ಎಂದು ಚಿದಾನಂದ ಗುರುಸ್ವಾಮಿ ಹೇಳಿದರು.

## ಅಂಚೆ ಮತಪತ್ರ ವಿತರಣೆ ವ್ಯವಸ್ಥಿತವಾಗಿರಲಿ

▶▶ ಮೊದಲನೇ ಪುಟದಿಂದ

ಚುನಾವಣಾ ಆಯೋಗದ ಮಾರ್ಗಸೂಚಿಯಂತೆ ನಿಗದಿತ ದಿನಾಂಕದೊಳಗೆ ಅಂಚೆ ಮತಪತ್ರ ವಿತರಣೆ ಮತ್ತು ಒಪ್ಪಿಗೆ ಪತ್ರಗಳನ್ನು ಸಂಗ್ರಹಿಸುವಂತೆ ನೋಡಲ್ ಅಧಿಕಾರಿಗಳಿಗೆ ಸೂಚನೆ ನೀಡಿದ ಅವರು, ಯಾವುದೇ ಅರ್ಹ ಮತದಾರರು ಈ ಸೌಲಭ್ಯದಿಂದ ವಂಚಿತರಾಗದಂತೆ ಎಚ್ಚರವಹಿಸುವಂತೆ ಸೂಚನೆ ನೀಡಿದರು.

ಜಿಲ್ಲೆಯಲ್ಲಿ 85 ವರ್ಷ ಮೀರಿದವರು, ವಿಕಲಚೇತನರು ಮತ್ತು ಕೋವಿಡ್ ಪೀಡಿತರಿಗೆ ವಿತರಿಸಲಾಗುವ ಅಂಚೆಪತ್ರ ಪತ್ರಗಳ ವಿತರಣಾ ಕಾರ್ಯವನ್ನು ಸಹ ಅತ್ಯಂತ ವ್ಯವಸ್ಥಿತವಾಗಿ ನಿರ್ವಹಿಸಬೇಕು. ಯಾವುದೇ ಗೊಂದಲಗಳಿಗೆ ಅವಕಾಶ ಬೇಡ. ಪ್ರತಿಯೊಬ್ಬ ಅರ್ಹರ ಮನೆಗಳಿಗೂ ಭೇಟಿ ನೀಡಿ 12ಡಿ ಫಾರಂ ವಿತರಿಸಿ, ಒಪ್ಪಿಗೆ ಪತ್ರ ಪಡೆಯುವಂತೆ ಅಗತ್ಯ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸುರೇಖಾ ಹಾಗೂ ಅಂಚೆ ಪತ್ರ ವಿತರಣೆಗೆ ನಿಯೋಜಿಸಲಾದ ವಿವಿಧ ಇಲಾಖೆಗಳ ನೋಡಲ್ ಅಧಿಕಾರಿಗಳು ಉಪಸ್ಥಿತರಿದ್ದರು.

## ಗ್ರಾಹಕ ಸಲಹಾ ಸಮಿತಿಗೆ ನೇಮಕ

■ ವಿಜಯಸಾಕ್ಷಿ ಸುದ್ದಿ, ರೋಣ



ನರೆಗಲ್ಲ ಶಾಖಾ ಮಟ್ಟದ ಗ್ರಾಹಕ ಸಲಹಾ ಸಮಿತಿಗೆ ನಾಮನಿರ್ದೇಶಿತ ಸದಸ್ಯರನ್ನಾಗಿ ಸರಕಾರ ಮಾರನಬಸರಿ ಗ್ರಾಮದ ವೀರಣ್ಣ ಸಾಖಾ ಅವರನ್ನು ನೇಮಕ ಮಾಡಿದ್ದು, ಈ ಕೂಡಲೇ ಕಾರ್ಯಪ್ರವೃತ್ತರಾಗಿ ಪಕ್ಷ ಸಂಘಟನೆಯಲ್ಲಿ ಹಾಗೂ ಸಮಾಜಮುಖಿ ಕೆಲಸಗಳಲ್ಲಿ ತೊಡಗಿಕೊಳ್ಳಬೇಕು ಎಂದು ರಾಜ್ಯ ಖನಿಜ ನಿಗಮದ ಅಧ್ಯಕ್ಷರು, ಶಾಸಕರಾದ ಜಿ.ಎಸ್. ಪಾಟೀಲ ಆದೇಶಿಸಿದ್ದಾರೆ.

## ಗ್ಯಾರಂಟಿ ಸಮಿತಿ ಪದಾಧಿಕಾರಿಗಳ ನೇಮಕ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಲಕ್ಷ್ಮೇಶ್ವರ ತಾಲೂಕಾ ಅಧ್ಯಕ್ಷರಾಗಿ ರಾಮಗಿರಿ ಗ್ರಾಮದ ನಾಗರಾಜ ಮಡಿವಾಳರ ಅವರನ್ನು ನೇಮಕ ಮಾಡಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಆದೇಶಿಸಿದ್ದಾರೆ.

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ತಾಲೂಕು ಹಂತದ ಗ್ರಾಮೀಣ ಭಾಗದಲ್ಲೂ ಸಮರ್ಪಕವಾಗಿ ಅನುಷ್ಠಾನಗೊಳಿಸಲು ಮತ್ತು ಮೇಲ್ವಿಚಾರಣೆ ಮಾಡಲು ಗ್ಯಾರಂಟಿ ಸಮಿತಿ ಪದಾಧಿಕಾರಿಗಳನ್ನು ನೇಮಕ ಮಾಡಲಾಗಿದ್ದು, ಅಧ್ಯಕ್ಷರಾಗಿ ನಾಗರಾಜ ಮಡಿವಾಳರ, ಸದಸ್ಯರಾಗಿ ರಮಜಾನ್ ಸಾಬ್ ನದಾಫ್, ಜಿ.ಆರ್. ಕೊಪ್ಪದ, ಜಯಮ್ಮ ಕಳ್ಳಿ, ಸರ್ಫರಾಜ ಸೂರಣಗಿ, ಸಿದ್ದಲಿಂಗೇಶ ರಗಟಿ, ಎಂ.ಎಸ್. ಪ್ರಭಯ್ಯನವರ ಮಠ, ನೂರುಅಹ್ಮದ್ ರಿತ್ತಿ, ಕಲ್ಲಪ್ಪ ಗಂಗಣ್ಣವರ, ರಾಜು ಕೆರೆಕೊಪ್ಪದ, ರಮೇಶ ಬಾರಕೇರ, ಶಶಿಕಲಾ ಬಡಿಗೇರ, ಶಿವನಗೌಡ ಪಾಟೀಲ, ಹಸನ ಜಂಗ್ಲಿ, ಕಾರ್ತಿಕ ದೊಡ್ಡಮನಿ ಹಾಗೂ ಸದಸ್ಯ ಕಾರ್ಯದರ್ಶಿಯಾಗಿ ಕಾರ್ಯನಿರ್ವಾಹಕ ಅಧಿಕಾರಿಗಳು ತಾಲೂಕು ಪಂಚಾಯಿತಿ ಲಕ್ಷ್ಮೇಶ್ವರ ಇವರನ್ನು ನೇಮಕ ಮಾಡಿ ಆದೇಶಿಸಲಾಗಿದೆ.

## ಗ್ರಾಹಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಬಿಎಸ್‌ಎನ್‌ಎಲ್ ಈಗ ತನ್ನ ಬಳಕೆದಾರರಿಗೆ ಅಪ್ ಗ್ರೇಡ್ ಆಗಿದೆ. ತಾವು ಬಿಎಸ್‌ಎನ್‌ಎಲ್ ಬಳಕೆದಾರರಾಗಿದ್ದರೆ ಮತ್ತು ಉಚಿತ 4ಜಿ ಸಿಮ್ ಅನ್ನು ಹೆಚ್ಚಿನ ವೇಗದ 4ಜಿ ನೆಟ್ ವರ್ಕ್ ಅನ್ನು ಪ್ರವೇಶಿಸಲು ಬಯಸಿದರೆ, ಪ್ರಸ್ತುತ ಸಿಮ್ ಕಾರ್ಡ್ ಅನ್ನು 4ಜಿ ಸಿಮ್‌ಗೆ ಅಪ್‌ಗ್ರೇಡ್ ಮಾಡುವುದು ಕಡ್ಡಾಯವಾಗಿದೆ.

ಮೂಲ ಆಧಾರ್ ಕಾರ್ಡ್/ ವೋಟರ್ ಐಡಿ/ ಡ್ರೈವಿಂಗ್ ಲೈಸೆನ್ಸನೊಂದಿಗೆ ದಯವಿಟ್ಟು ಯಾವುದೇ ಬಿಎಸ್‌ಎನ್‌ಎಲ್ ಸಿಎಸ್ಸಿ/ ಚಿಲ್ಲರೆ ಅಂಗಡಿಗಳನ್ನು ತಲುಪಿ ಮತ್ತು 4ಜಿ ಸಿಮ್ ಅನ್ನು ಉಚಿತವಾಗಿ ಪಡೆಯಬಹುದಾಗಿದೆ ಎಂದು ಬಿ ಎಸ್ ಎನ್ ಎಲ್ ಪ್ರಕಟಣೆ ತಿಳಿಸಿದೆ.

ಅವಕಾಶ ಬಳಿಸಿಕೊಳ್ಳಿ : ಎಲ್ಲ ಬಿಎಸ್‌ಎನ್‌ಎಲ್ ಸಿಎಸ್‌ಸಿಗಳು ಮಾರ್ಚ್ 24, 29 ಮತ್ತು 31 ರಂದು ತೆರೆದಿರುತ್ತವೆ. ಗ್ರಾಹಕರು ಈ ಅವಕಾಶವನ್ನು ಬಳಸಿಕೊಳ್ಳಲು ಮತ್ತು ಬಿ ಎಸ್ ಎನ್ ಎಲ್ ಸೇವೆಗಳನ್ನು ಪಡೆದುಕೊಳ್ಳಲು ಪ್ರಕಟಣೆ ತಿಳಿಸಿದೆ.

ಶ್ರೀ ರೇಣುಕ ದರ್ಶನ ಪ್ರವಚನ ಕಾರ್ಯಕ್ರಮದಲ್ಲಿ ಮಲ್ಲಿಕಾರ್ಜುನ ಶ್ರೀಗಳು

# ಶಿವಜ್ಞಾನದಿಂದ ಬದುಕು ಬೆಳಗಬಲ್ಲದು

■ ವಿಜಯಸಾಕ್ಷಿ ಸುದ್ದಿ, ಗದಗ



ಜೀವನದ ಸರಿಯಾದ ಸಾರವನ್ನು ಪ್ರವಚನಗಳ ಮೂಲಕ ತಿಳಿದುಕೊಂಡು ಆಧ್ಯಾತ್ಮಿಕ ಜ್ಞಾನ, ಶಿವಜ್ಞಾನವನ್ನು ಪಡದುಕೊಂಡರೆ ನಮ್ಮ ಬದುಕು ಬೆಳಗಬಲ್ಲದು ಎಂದು ನರೇಗಲ್ಲದ ಮಲ್ಲಿಕಾರ್ಜುನ ಶಿವಾಚಾರ್ಯರು ತಿಳಿಸಿದರು.

ನಗರದ ಮುಳಗುಂದ ನಾಕಾ ಬಳಿ ಇರುವ ಶ್ರೀ ರೇಣುಕ ಮಂದಿರದಲ್ಲಿ ರೇಣುಕಾಚಾರ್ಯ ಜಯಂತಿ ಹಾಗೂ ರಥೋತ್ಸವ ನಿಮಿತ್ಯ ಹಮ್ಮಿಕೊಂಡಿರುವ ಶ್ರೀ ರೇಣುಕ ದರ್ಶನ ಪ್ರವಚನ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡುತ್ತಿದ್ದರು.

ವೀರಶೈವ ಧರ್ಮದ ಸಂಸ್ಥಾಪಕರಾದ ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ದಶಸೂತ್ರಗಳು ಮನುಷ್ಯನ ಅಜ್ಞಾನದ ಕತ್ತಲೆಯನ್ನು ಪೂರ್ಣಚಂದ್ರಿಕೆಯು ದಾರಿ ತೋರುವಂತೆ ರೇಣುಕರ ಉಪದೇಶಗಳು ಸರ್ವರಿಗೂ ಮಾರ್ಗದರ್ಶಕವಾಗಿವೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಕಿರಣ ಭೂಮಾ ಹಾಗೂ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಸಂತೋಷ ಚನ್ನಪ್ಪನವರ, ನಾರಾಯಣ ಕುಡತರಕರ, ಡಾ. ಗಚ್ಚಿನಮಠರನ್ನು ಸನ್ಮಾನಿಸಲಾಯಿತು.

ರೇಣುಕ ದರ್ಶನದ ಪ್ರಥಮ ದಿನದ ಪ್ರವಚನವನ್ನು ನವನಗರದ ರಾಜಶೇಖರ ಶಿವಾಚಾರ್ಯರು ಪ್ರಾರಂಭದ ನುಡಿಗಳನ್ನಾಡಿದರು. ಜಗದ್ಗುರು ಪಂಚಾಚಾರ್ಯ ಸೇವಾ ಸಂಘದ ಉಪಾಧ್ಯಕ್ಷ ಚಂದ್ರು ಬಾಳಿಹಳ್ಳಿಮಠ ಪ್ರಾಸ್ತಾವಿಕವಾಗಿ ಮಾತನಾಡುತ್ತ, 83 ವರ್ಷದ ಹಿಂದೆ ರಂಭಾಪುರಿ ಶ್ರೀ ವೀರ ಗಂಗಾಧರ ಜಗದ್ಗುರುಗಳ ಅಮೃತ ಹಸ್ತದಿಂದ ಪ್ರಾರಂಭವಾದ ಸಂಘವು ಅನೇಕ ಧಾರ್ಮಿಕ ಕಾರ್ಯಕ್ರಮಗಳನ್ನು ಹಾಗೂ ಸಮಾಜಮುಖಿ ಕೆಲಸಗಳನ್ನು ಮಾಡಿಕೊಂಡು ಬರುತ್ತಿದೆ ಎಂದು ಪ್ರತಿ ವರುಷ ಸಂಘದಿಂದ ರೇಣುಕಾಚಾರ್ಯ ಜಯಂತಿ ರಥೋತ್ಸವವನ್ನು ಅದ್ದೂರಿಯಾಗಿ ಆಚರಿಸುತ್ತಿರುವುದನ್ನು ಸ್ಮರಿಸಿದರು.

ಪ್ರವಚನ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸಿ ಉದ್ಘಾಟನೆ ಮಾಡಿದ ಗಣ್ಯ ಉದ್ಯಮಿ, ದತ್ತಾ ಡೆವಲಪರ್ಸ್‌ನ ಎಂಡಿ ಕಿರಣ ಭೂಮಾ ಮಾತನಾಡಿ, ಪ್ರತಿ ವರುಷ ಪ್ರವಚನ ಏರ್ಪಡಿಸುತ್ತಿರುವುದು ಬಹಳ ಸಂತೋಷ. ರಂಭಾಪುರಿ ಪೀಠದ ಧ್ಯೇಯ ವಾಕ್ಯವಾದ 'ಮಾನವ ಧರ್ಮಕ್ಕೆ ಜಯವಾಗಲಿ ಧರ್ಮದಿಂದಲೇ ವಿಶ್ವಕ್ಕೆ ಶಾಂತಿ' ಎನ್ನುವುದು ಎಲ್ಲರನ್ನೂ ಎಚ್ಚರಿಸುತ್ತದೆ. ಮಾನವ ಧರ್ಮಕ್ಕೆ ಜಯವಾಗಲಿ ಎನ್ನುವ ವಿಶಾಲ ದೃಷ್ಟಿಕೋನ ಎಲ್ಲರ ಹೃದಯ ಅರಳುವಂತೆ ಮಾಡುತ್ತದೆ ಎಂದರು.

ಪ್ರಾರಂಭದಲ್ಲಿ ಶ್ರೀ ಜಗದ್ಗುರು ಪಂಚಾಚಾರ್ಯ ವೇದ, ಆಗಮ, ಸಂಸ್ಕೃತ ಪಾಠಶಾಲೆಯ ವಟುಗಳು ವೇದಘೋಷ ಮಾಡಿದರು. ಮಹೇಶ ಕುಂದ್ರಾಳಹಿರೇಮಠರಿಂದ ಭಕ್ತಿ ಸಂಗೀತ ಸುಧೆ ಜರುಗಿತು. ಜಗದ್ಗುರು ಪಂಚಾಚಾರ್ಯ ಸೇವಾ ಸಂಘದ ಅಧ್ಯಕ್ಷರಾದ ಮಂಜುನಾಥ ಬೇಲೇರಿ ಸ್ವಾಗತಿಸಿದರು. ಪ್ರಧಾನ ಕಾರ್ಯದರ್ಶಿ ವಿ. ಕೆ. ಗುರುಮಠ ನಿರೂಪಿಸಿದರು. ವೇ. ಮೂ. ಮಹೇಶ್ವರಸ್ವಾಮಿ ಹೊಸಳ್ಳಿಮಠ ವೇದಿಕೆ ಮೇಲೆ ಉಪಸ್ಥಿತರಿದ್ದರು. ಭಕ್ತಿ ಸೇವೆ ವಹಿಸಿಕೊಂಡಿದ್ದ ಮಹೇಶ ಅಬ್ಬಿಗೇರಿ, ಯು. ಆರ್. ಭೂಸನೂರಮಠ, ಶ್ರೀಕಾಂತ ಲಕ್ಕುಂಡಿ, ಸಿ. ಬಿ. ಹಿರೇಗೌಡ್ರ ರಾಜಣ್ಣ ಮಲ್ಲಾಡದ, ಸಿ. ಜಿ. ಅಬ್ಬಿಗೇರಿಮಠ, ಎಸ್. ಎಸ್. ಮೇಟಿ ಇವರಿಗೆ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಪಾಠಶಾಲೆಯ ಪ್ರಾಧ್ಯಾಪಕ ಗುರುಸಿದ್ದಯ್ಯ ಹಿರೇಮಠ, ಸುರೇಶ ಅಬ್ಬಿಗೇರಿ, ಪ್ರಭು ದಂಡಾವತಿಮಠ, ವಿರೇಶ ಕೂಗು, ಬಸಯ್ಯ ಸಾಸ್ವಿಹಳ್ಳಿಮಠ, ಸಿದ್ದಲಿಂಗಪ್ಪ ಚಳಗೇರಿ, ವಿಜಯಕುಮಾರ ಹಿರೇಮಠ, ರಾಜು ಮುಧೋಳ, ವೀರಣ್ಣ ಧನ್ನೂರಹೀರೆಮಠ, ಮಹಿಳಾ ಘಟಕ ಪದಾಧಿಕಾರಿಗಳು ಸೇರಿದಂತೆ ಅನೇಕರು ಭಾಗಿಯಾಗಿದ್ದರು.

# ಬಸವರಾಜ ಬೊಮ್ಮಾಯಿ ಮತಯಾಚನೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಾವೇರಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ, ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅವರು ಕ್ಷೇತ್ರದ ಎಲ್ಲ ನಾಯಕರು, ಅಪಾರ ಕಾರ್ಯಕರ್ತರ ಸಹಭಾಗಿತ್ವದಲ್ಲಿ ಸೋಮವಾರ ಲಕ್ಷ್ಮೇಶ್ವರದಲ್ಲಿ ಬೈಕ್ ರ್‍ಯಾಲಿ ನಡೆಸಿ, ಮೊದಲ ಸುತ್ತಿನ ಮತಯಾಚನೆ ಮಾಡಿದರು.

ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ ಬೈಕ್ ರ್‍ಯಾಲಿಗೆ ಚಾಲನೆ ನೀಡಿ, ತೆರೆದ ವಾಹನದಲ್ಲಿ ಸೋಮೇಶ್ವರ ದೇವಸ್ಥಾನದಿಂದ ಹೊಸಬಸ್ ನಿಲ್ದಾಣ, ಶಿಗ್ಲಿ ನಾಕಾ, ಮುಖ್ಯ ಬಜಾರ್ ರಸ್ತೆ ಮೂಲಕ ಸಾಗಿದರು. ಬಳಿಕ ದೂದಪೀರಾಂ ದರ್ಗಾಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದರು. ಬಳಿಕ ವೀರಗಂಗಾಧರ ಸಮುದಾಯ ಭವನದಲ್ಲಿ ನಡೆದ ಸಭೆಯನ್ನುದ್ದೇಶಿಸಿ ಮಾತನಾಡಿದರು.

ಈ ವೇಳೆ ಪಕ್ಷದ ಪ್ರಮುಖರಾದ ಸಿ.ಸಿ. ಪಾಟೀಲ, ಡಾ.ಚಂದ್ರು ಲಮಾಣಿ, ಅರವಿಂದ ಬೆಲ್ಲದ, ಎಸ್.ವಿ. ಸಂಕನೂರ, ರಾಜು ಕುರಡಗಿ, ಗಂಗಣ್ಣ ಮಹಾಂತಶೆಟ್ಟರ, ಅಶೋಕ ಬಟಗುರ್ಕಿ, ಶಿವಯೋಗಿ ಅಂಕಲಕೋಟಿ, ಚಂಬಣ್ಣ ಬಾಳಿಕಾಯಿ, ದೇವಣ್ಣ ಬಳಿಗಾರ ಸೋಮಣ್ಣ ಡಾಣಗಲ, ಸುನೀಲ ಮಹಾಂತಶೆಟ್ಟರ, ಲೋಹಿತ ನೆಲವಗಿ, ಪ್ರವೀಣ ಬಾಳಿಕಾಯಿ, ಜಾನು ಲಮಾಣಿ, ಗಂಗಾಧರ ಮೆಣಸಿನಕಾಯಿ ಪ್ರಕಾಶ ಬೆಂತೂರ, ಪರಶುರಾಮ ಇಮ್ಮಡಿ, ಜಗದೀಶಗೌಡ ಪಾಟೀಲ, ರುದ್ರಪ್ಪ ಉಮಚಗಿ, ದುಂಡೇಶ ಕೊಟಗಿ, ಜಹೀರ ಮೋಮಿನ್, ಶಿವಯ್ಯ ಮಠಪತಿ, ಶಿವಣ್ಣ ಲಮಾಣಿ, ಬಸವರಾಜ ಚಕ್ರಸಾಲಿ, ನವೀನ ಹಿರೇಮಠ, ವಿಜಯ ಕುಂಬಾರ ಸೇರಿ ನೂರಾರು ಕಾರ್ಯಕರ್ತರಿದ್ದರು.

## ದೇಶ ಬದಲಾವಣೆ ಬಯಸುತ್ತಿದೆ, ಮೋದಿ ಸರ್ಕಾರದ ಗ್ಯಾರಂಟಿಗಳು 2004ರಂತೆಯೇ ಟೊಳ್ಳು

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ದೇಶ ಬದಲಾವಣೆ ಬಯಸುತ್ತಿದೆ ಎಂದು ಪ್ರತಿಪಾದಿಸಿರುವ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮೋದಿ ಸರ್ಕಾರ ಹೇಳುತ್ತಿರುವ ಗ್ಯಾರಂಟಿಗಳು 2004 ರ 'ಇಂಡಿಯಾ ಶೈನಿಂಗ್' ಘೋಷಣೆಯಂತೆಯೇ ಇರಲಿವೆ ಎಂದು ಮಂಗಳವಾರ ಹೇಳಿದ್ದಾರೆ.

ಲೋಕಸಭೆ ಚುನಾವಣೆಗೆ ಪಕ್ಷದ ಪ್ರಣಾಳಿಕೆ ಕುರಿತು ಚರ್ಚಿಸಲು ಮತ್ತು ಅನುಮೋದಿಸಲು ಪಕ್ಷದ ಉನ್ನತ ನಿರ್ಧಾರ ತೆಗೆದುಕೊಳ್ಳುವ ಕಾಂಗ್ರೆಸ್ ಕಾರ್ಯಕಾರಿ ಸಮಿತಿ (ಸಿಡಬ್ಲ್ಯೂಸಿ) ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಪಕ್ಷದ ಪ್ರಣಾಳಿಕೆಯಲ್ಲಿ ಪ್ರಸ್ತಾಪಿಸಲಾದ ಪ್ರತಿಯೊಂದು ವಿಷಯವನ್ನು ಎಲ್ಲಾ ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರು ತೆಗೆದುಕೊಂಡು ದೇಶಾದ್ಯಂತ ಪ್ರತಿ ಹಳ್ಳಿ, ಪಟ್ಟಣ ಹಾಗೂ ಮನೆ ಮನೆಗೆ ತಲುಪಿಸುವಂತೆ ಒತ್ತಾಯಿಸಿದರು.

## ಚೆಕ್‌ಪೋಸ್ಟ್‌ಗೆ ಸಿಇಒ ಭರತ್ ಅನಿರೀಕ್ಷಿತ ಭೇಟಿ

■ ವಿಜಯಸಾಕ್ಷಿ ಸುದ್ದಿ, ರೋಣ

ಲೋಕಸಭಾ ಚುನಾವಣೆ 2024ರ ಹಿನ್ನೆಲೆಯಲ್ಲಿ ಈಗಾಗಲೆ ಜಿಲ್ಲಾದ್ಯಂತ ಮಾದರಿ ನೀತಿ ಸಂಹಿತೆ ಜಾರಿಯಲ್ಲಿದೆ. ಅಕ್ರಮ ನಗದು, ಸಾಮಗ್ರಿ ತಡೆಗಾಗಿ ಜಿಲ್ಲಾ ಆಡಳಿತ ಜಿಲ್ಲಾದ್ಯಂತ 12 ಸ್ಥಳಗಳಲ್ಲಿ ಚೆಕ್‌ಪೋಸ್ಟ್‌ಗಳನ್ನು ತೆರೆದು ಪ್ರತಿ ದಿನ ನಿರಂತರವಾಗಿ ವಾಹನಗಳ ತಪಾಸಣೆ ಜರುಗಿಸಲಾಗುತ್ತಿದೆ.

ಮಂಗಳವಾರ ರೋಣ ತಾಲೂಕಿನ ಹಿರೇಹಾಳ ಚೆಕ್‌ಪೋಸ್ಟ್ ಗೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಭರತ್ ಎಸ್. ಅವರು ಅನಿರೀಕ್ಷಿತ ಭೇಟಿ ನೀಡಿ ಪರಿಶೀಲಿಸಿದರು.

ಚೆಕ್‌ಪೋಸ್ಟ್‌ನಲ್ಲಿ ನಡೆಸಲಾಗುವ ತಪಾಸಣೆ ಕುರಿತು ಮಾಹಿತಿ ಪಡೆದ ಅವರು, ದಾಖಲೆಗಳಿಲ್ಲದೆ ನಗದು, ಸಾಮಗ್ರಿ, ಚಿನ್ನಾಭರಣ, ಮದ್ಯ ಹಾಗೂ ವಾಣಿಜ್ಯ ಸರಕುಗಳನ್ನು ವಾಹನಗಳಲ್ಲಿ ಸಾಗಾಟ ಮಾಡುವುದನ್ನು ಪರಿಶೀಲಿಸಬೇಕು. ದಾಖಲೆ ರಹಿತ ಸಾಮಗ್ರಿಗಳು, ನಗದು ದೊರೆತರೆ ನಿಯಮಾನುಸಾರ ಪ್ರಕರಣ ದಾಖಲಿಸುವಂತೆ ಚೆಕ್ ಪೋಸ್ಟ್ ನಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿ ಸಿಬ್ಬಂದಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ರೋಣ ತಾಲೂಕ ಪಂಚಾಯತ ಕಾರ್ಯ ನಿರ್ವಾಹಕ ಅಧಿಕಾರಿ ರವಿ. ಎ.ಎನ್, ಸಹಾಯಕ ನಿರ್ದೇಶಕ ರಿಯಾಜ್ ಖತೀಬ್, ಎಡಿಪಿಸಿ ಕಿರಣಕುಮಾರ ಸೇರಿದಂತೆ ಚೆಕ್ ಪೋಸ್ಟ್ ಅಧಿಕಾರಿಗಳು, ಸಿಬ್ಬಂದಿಗಳು ಹಾಜರಿದ್ದರು.





■ ವಿಜಯಸಾಕ್ಷಿ ಸುದ್ದಿ, ರೋಣ

ಹಾವೇರಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಪರವಾಗಿ ಅವರ ಸಹೋದರ ಅಜಯಸ್ವಾಮಿ ಗಡ್ಡದೇವರಮಠರವರು ರೋಣ ಪಟ್ಟಣಕ್ಕೆ ಮಂಗಳವಾರ ಆಗಮಿಸಿ ದೇವಸ್ಥಾನ, ಮಸೀದಿ, ಚರ್ಚ್‌ಗಳಿಗೆ ಭೇಟಿ ನಿಡಿದರು. ಈ ಸಂದರ್ಭದಲ್ಲಿ ಪುರಸಭೆಯ ಉಪಾಧ್ಯಕ್ಷ ಸಂಗನಗೌಡ ಪಾಟೀಲ, ಮುಖಂಡ ಅಕ್ಷಯ ಪಾಟೀಲ, ವೀರಣ್ಣ ಶೆಟ್ಟರ, ಗದಿಗೆಪ್ಪ ಕಿರೆಸೂರ, ಮೌನೇಶ ಹಾದಿಮನಿ, ಶಿವು ಹುಲ್ಲೂರ ಸೇರಿದಂತೆ ಅನೇಕ ಮುಖಂಡರಿದ್ದರು.

ಅಗಡಿ ಇಂಜಿನಿಯರಿಂಗ್ ಕಾಲೇಜಿನ 20ನೇ ಸಂಸ್ಥಾಪನಾ ದಿನಾಚರಣೆ

# 'ನಾನು ಸಾಧಿಸಬಲ್ಲೆ' ಎಂಬ ಛಲವಿರಲಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಭವಿಷ್ಯದ ಕನಸುಗಳಿಗೆ ಬೆಳಕಾಗುವ ತಂತ್ರಜ್ಞಾನದ ಶಿಕ್ಷಣವು ಇಂದು ಆಧುನಿಕ ಜಗತ್ತನ್ನು ಆಳುತ್ತಿದೆ. ಇದರ ಸ್ಪಷ್ಟ ಪರಿಕಲ್ಪನೆಯೊಂದಿಗೆ ವಿದ್ಯಾರ್ಥಿಗಳು ಸತತಾಭ್ಯಾಸ, ಪರಿಶ್ರಮ, ಶ್ರದ್ಧೆ, ಏಕಾಗ್ರತೆ ರೂಢಿಸಿಕೊಂಡು ಉನ್ನತ ಗುರಿ ಸಾಧಿಸಬೇಕು ಎಂದು ಬೆಂಗಳೂರಿನ ಸೋನಾಟಾ ಸಾಫ್ಟ್‌ವೇರ್‌ನ ವೈಸ್ ಚೇರಮನ್ ಶ್ರೀಕರ ರಡ್ಡಿ ಹೇಳಿದರು.

ಅವರು ಮಂಗಳವಾರ ಲಕ್ಷ್ಮೇಶ್ವರದ ಶ್ರೀಮತಿ ಕಮಲಾ-ಶ್ರೀ ವೆಂಕಪ್ಪ ಎಂ.ಅಗಡಿ ಇಂಜಿನಿಯರಿಂಗ್ ಕಾಲೇಜಿನ 20ನೇ ಸಂಸ್ಥಾಪನಾ ದಿನಾಚರಣೆ ಸಮಾರಂಭ ಉದ್ಘಾಟಿಸಿ ಮಾತನಾಡಿ, ಪ್ರಸ್ತುತ ಮಾಹಿತಿ-ತಂತ್ರಜ್ಞಾನ ಯುಗದಲ್ಲಿನ ನವೀನ ಸಂಪರ್ಕ ಸಾಧನ ಬಳಸಿ ವಿಜ್ಞಾನ ಕ್ಷೇತ್ರದಲ್ಲಿ ಹೊಸ ಅವಿಷ್ಕಾರ, ಸಂಶೋಧನೆ ಮಾಡಬೇಕು. ಯಾವುದೇ ಕಾರ್ಯವನ್ನು ಕೈಗೊಂಡಾಗಲೂ ನಾನು ಅದನ್ನು ಸಾಧಿಸಬಲ್ಲೆ ಎನ್ನುವ ದೃಷ್ಟಿಯಲ್ಲಿ ಸಾಗುವದು ಅವಶ್ಯವಾಗಿದೆ ಎಂದರು.

ಸಂಸ್ಥೆಯ ಅಧ್ಯಕ್ಷ ಹರ್ಷವರ್ಧನ ಅಗಡಿ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ವಿದ್ಯಾರ್ಥಿಗಳು ಆಯ್ದುಕೊಂಡ ಕ್ಷೇತ್ರದಲ್ಲಿ ಶ್ರೇಷ್ಠವಾದುದನ್ನು ಸಾಧಿಸಿಲು ಸ್ವತಂತ್ರ ಮನೋಭಾವ, ಕ್ರಿಯಾತ್ಮಕತೆ, ಏಕಾಗ್ರತೆ ರೂಢಿಸಿಕೊಳ್ಳಬೇಕು. ನಿಮ್ಮ ಭವಿಷ್ಯದ ರೂವಾರಿಗಳು ನೀವೇ ಆದ್ದರಿಂದ ಉನ್ನತ ಶಿಕ್ಷಣ, ಜ್ಞಾನ ಮತ್ತು ನಾಯಕತ್ವದ ಗುಣ ಬೆಳೆಸಿಕೊಂಡು ಸಮಾಜಮುಖಿಯಾಗಿ ದೇಶದ ಅಭಿವೃದ್ಧಿಗೆ ಕೈ ಜೋಡಿಸಬೇಕು. ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ತಂತ್ರಜ್ಞಾನ, ಹೊಸ ಅವಿಷ್ಕಾರಗಳ ಕಲ್ಪನೆ ಮತ್ತು ಇಂಗ್ಲೀಷ್ ಭಾಷೆಯ ಜ್ಞಾನ ಅಗತ್ಯವಾಗಿದ್ದು, ಪರಸ್ಪರ ಭಾಷಾ ಸಂವಹನದ ಮೂಲಕ ಭಾಷೆಯ ಜ್ಞಾನ ಹೊಂದಬೇಕು. ಕೀಳರಿಮೆ ಮರೆತು ಆತ್ಮವಿಶ್ವಾಸ, ಶಿಸ್ತು ಹೊಂದಬೇಕು ಎಂದರು.

ಸಭೆಯಲ್ಲಿ ಸಂಸ್ಥೆಯ ಉಪಾಧ್ಯಕ್ಷೆ ಗೀತಾ ಅಗಡಿ, ಪ್ರಾಚಾರ್ಯ ಡಾ. ಪರಶುರಾಮ ಬಾರ್ಕಿ, ಪಿಯು ಕಾಲೇಜ್ ಪ್ರಾಚಾರ್ಯ ಡಾ. ಎನ್.ಹಯವದನ, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ರಾಜಶೇಖರ ಮೂಲಿಮನಿ, ಟ್ರಸ್ಟಿ ಶಿಶಿರ ದೇಸಾಯಿ, ಡಾ. ದೇವೆಂದ್ರಪ್ಪ ಕೆ, ಮಾಲತೇಶ ಅಗಡಿ, ಡಾ. ಸುಜಾತಾ ಸಂಗೂರ, ವಿ.ಕೆ. ಕುಷ್ಟಗಿ, ಡಾ. ಸುಭಾಸ ಮೇಟಿ, ಡಾ. ಆರ್.ಎಂ. ಪಾಟೀಲ ಹಾಗೂ ಎಲ್ಲ ವಿಭಾಗಗಳ ಮುಖ್ಯಸ್ಥರು, ಉಪನ್ಯಾಸಕರು ಹಾಜರಿದ್ದರು. ಡಾ.ಸ್ವಪ್ನ ಚನ್ನಪ್ಪಗೌಡ್ರ ಸ್ವಾಗತಿಸಿದರು.

ವಿದ್ಯಾರ್ಥಿಗಳಾದ ಪ್ರಿಯಾಂಕ, ಶ್ರೀಲಕ್ಷ್ಮೀ, ನಿಶಾ, ದಿವ್ಯಶ್ರೀ, ರಕ್ಷಿತಾ, ಪ್ರತಿಭಾ, ನಿರೂಪಿಸಿದರು.

ಗ್ರಾಮೀಣ ಭಾಗದ ಬಡ ವಿದ್ಯಾರ್ಥಿಗಳಿಗೂ ಮಾಹಿತಿ-ತಂತ್ರಜ್ಞಾನದ ಶಿಕ್ಷಣ ಸಿಗಬೇಕೆಂಬ ಉದ್ದೇಶದಿಂದ ವೆಂಕಪ್ಪ ಅಗಡಿ ಅವರು ಸ್ಥಾಪಿಸಿದ ಕಾಲೇಜಿನಲ್ಲಿ ವಿವಿಧ ವಿಭಾಗಗಳಲ್ಲಿ 1200ಕ್ಕೂ ಹೆಚ್ಚು ವಿದ್ಯಾರ್ಥಿಗಳು ಅಭ್ಯಸಿಸುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ಶ್ರೀಕರ ರಡ್ಡಿ ಮೆಚ್ಚುಗೆ ವ್ಯಕ್ತಪಡಿಸಿದರು.

## ವಿಮಾನ ನಿಲ್ದಾಣದಲ್ಲಿ ನಾಲ್ವರು ಪ್ರಯಾಣಿಕರಿಂದ 1 ಕೋಟಿ ರೂ. ಮೌಲ್ಯದ ಚಿನ್ನ ಜಪ್ತಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬೆಂಗಳೂರು ಏರ್‌ಪೋರ್ಟ್ ಕಸ್ಟಮ್ಸ್‌ನ ಏರ್ ಇಂಟೆಲಿಜೆನ್ಸ್ ಯೂನಿಟ್ ಸೋಮವಾರ ವಿವಿಧ ವಿಮಾನಗಳಲ್ಲಿ ಆಗಮಿಸಿದ ನಾಲ್ವರು ಪ್ರಯಾಣಿಕರಿಂದ ಸುಮಾರು ಒಂದು ಕೋಟಿ ರೂಪಾಯಿ ಮೌಲ್ಯದ 1.5 ಕಿಲೋಗ್ರಾಂಗಳಷ್ಟು ಚಿನ್ನವನ್ನು ವಶಪಡಿಸಿಕೊಂಡಿದೆ.

ಓರ್ವ ಮಹಿಳೆ ಸೇರಿದಂತೆ ಎಲ್ಲಾ ನಾಲ್ವರು ಪ್ರಯಾಣಿಕರು ಗಲ್ಫ್ ದೇಶಗಳಿಂದ ಮತ್ತು ಮಲೇಷ್ಯಾದಿಂದ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಭಾರತೀಯರು ಎಂದು ಕಸ್ಟಮ್ಸ್ ಅಧಿಕಾರಿಗಳು ತಿಳಿಸಿದ್ದಾರೆ.

ನಗರದಲ್ಲಿ ಐಟಿ ಮತ್ತು ಹಾರ್ಡ್‌ವೇರ್ ಉಪಕರಣಗಳನ್ನು ಮಾರಾಟ ಮಾಡುವ ಬೆಂಗಳೂರಿನ 30 ವರ್ಷದ ವ್ಯಕ್ತಿಯೊಬ್ಬರು ನಿನ್ನೆ ರಾತ್ರಿ 11 ಗಂಟೆ ಸುಮಾರಿಗೆ ಕೌಲಾಲಂಪುರದಿಂದ ಏರ್ ಏಷ್ಯಾ ವಿಮಾನದಲ್ಲಿ(ಎಕೆ-053) ಆಗಮಿಸಿದ್ದು, ಅವರು 197.43 ಗ್ರಾಂ ತೂಕದ ಚಿನ್ನವನ್ನು ಕಚ್ಚಾ ಚಿನ್ನದ ಕಡಾ ಮತ್ತು ಓ-ಲಿಂಕ್ ಚೈನ್ ರೂಪದಲ್ಲಿ ಚಿನ್ನವನ್ನು ಬಚ್ಚಿಟ್ಟಿದ್ದರು. ಇದರ ಒಟ್ಟು ಮಾರುಕಟ್ಟೆ ಮೌಲ್ಯ 12,55,655 ರೂ. ದೇಶದೊಳಗೆ ಕಚ್ಚಾ ಚಿನ್ನವನ್ನು ಯಾವುದೇ ರೂಪದಲ್ಲಿ ತರುವುದನ್ನು ನಿಷೇಧಿಸಲಾಗಿದೆ.

### ಗದಗ ಜಿಲ್ಲೆಯಲ್ಲಿ 23,420 ಪ್ರಕರಣಗಳು ರಾಜೀ ಸಂಧಾನದ ಮೂಲಕ ಇತ್ಯರ್ಥ: ಜಿಲ್ಲಾ ನ್ಯಾ. ಬಸವರಾಜ

# ಲೋಕ ಅದಾಲತ್‌ನಲ್ಲಿ ಒಂದಾದ 16 ದಂಪತಿಗಳು



■ ವಿಜಯಸಾಕ್ಷಿ ಸುದ್ದಿ, ಗದಗ

ಗೌರವಾನ್ವಿತ ಸರ್ವೋಚ್ಚ ನ್ಯಾಯಾಲಯ ನವದೆಹಲಿ, ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಇವರ ಆದೇಶದನ್ವಯ ರಾಜ್ಯಾದ್ಯಂತ ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಂಡಿದ್ದು, ಗದಗ ಜಿಲ್ಲೆಯಲ್ಲಿ ಮಾ. 16ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿತ್ತು. ಜಿಲ್ಲೆಯಲ್ಲಿ ಒಟ್ಟು 15 ಬೆಂಚ್‌ಗಳನ್ನು ರಚಿಸಿ ರಾಜೀ ಸಂಧಾನಕ್ಕೆ ಆಯ್ಕೆ ಮಾಡಿಕೊಳ್ಳಲಾಗಿತ್ತು. ಅದರಲ್ಲಿ 2,033 ಚಾಲ್ತಿ ಪ್ರಕರಣಗಳನ್ನು ಹಾಗೂ 21,387 ವ್ಯಾಜ್ಯ ಪೂರ್ವ ಪ್ರಕರಣಗಳನ್ನು ರಾಜೀ ಮೂಲಕ ಇತ್ಯರ್ಥಪಡಿಸಲಾಗಿದ್ದು, ಒಟ್ಟು 23,420 ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಲಾಗಿದೆ.

ಇತ್ಯರ್ಥಗೊಂಡ ಪ್ರಕರಣಗಳಲ್ಲಿ 8 ಮೋಟಾರು ವಾಹನ ಅಪಘಾತ ಪ್ರಕರಣಗಳು, 105 ಚೆಕ್ ಬೌನ್ಸ್ ಪ್ರಕರಣಗಳು, 40 ಕ್ರಿಮಿನಲ್ ಕಂಪೌಂಡೆಬಲ್ ಪ್ರಕರಣಗಳು, 307 ಅಸಲುದಾವೆ ಪ್ರಕರಣಗಳು, 374 ಬ್ಯಾಂಕ್ ಹಾಗೂ ಹಣ ವಸೂಲಾತಿ ಪ್ರಕರಣಗಳು, 24 ವೈವಾಹಿಕ ಪ್ರಕರಣಗಳು, 37 ವಿದ್ಯುಚ್ಛಕ್ತಿ ಪ್ರಕರಣಗಳು ಸೇರಿದಂತೆ ಒಟ್ಟು 2,033 ಚಾಲ್ತಿ ಪ್ರಕರಣಗಳನ್ನು ಒಟ್ಟು ರೂ.48,13,61,553ಗಳ ಪರಿಹಾರ ಒದಗಿಸಿ, ರಾಜೀ ಸಂಧಾನ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ.

ವ್ಯಾಜ್ಯಪೂರ್ವ ಪ್ರಕರಣಗಳಿಗೆ ಸಂಬಂಧಿಸಿದಂತೆ ವಿವಿಧ ಬ್ಯಾಂಕ್ ಪ್ರಕರಣಗಳು, ಬಿಎಸ್‌ಎನ್‌ಎಲ್, ಕಂದಾಯ ಅದಾಲತ್ ಪ್ರಕರಣಗಳು ಸೇರಿದಂತೆ ಒಟ್ಟು 21,387 ವ್ಯಾಜ್ಯಪೂರ್ವ ಪ್ರಕರಣಗಳನ್ನು ರೂ.5,27,49,628ಗಳಿಗೆ ರಾಜೀ ಸಂಧಾನ ಮಾಡಲಾಗಿದೆ.

ಗದಗದಲ್ಲಿ ಜರುಗಿದ ರಾಷ್ಟ್ರೀಯ ಲೋಕ ಅದಾಲತ್ ಕಾರ್ಯಕ್ರಮದಲ್ಲಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಬಸವರಾಜ, ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ರಾಜೇಶ್ವರ ಎಸ್.ಶೆಟ್ಟಿ, 1ನೇ ಹೆಚ್ಚುವರಿ ಕೌಟುಂಬಿಕ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶ ಖಾದರಸಾಬ ಎಚ್.ಬೆನಕಟ್ಟಿ, ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರಾದ ಪ್ರೀತಿ ಸದ್ಗುರು ಸದರಜೋಶಿ, ಅಪರ ಹಿರಿಯ ದಿವಾಣಿ ನ್ಯಾಯಾಧೀಶ ಪ್ರಕಾಶ ಸಿ.ಕುರುಬೆಟ್, ಪ್ರಧಾನ ದಿವಾಣಿ ನ್ಯಾಯಾಧೀಶ ಅರುಣ ಚೌಗಲೆ, ಜೆಎಂಎಫ್‌ಸಿ 1ನೇ ನ್ಯಾಯಾಲಯದ ನ್ಯಾಯಾಧೀಶರಾದ ಪುಷ್ಪಾ ಜೋಗೋಜಿ, ಜೆಎಂಎಫ್‌ಸಿ 2ನೇ ನ್ಯಾಯಾಲಯದ ನ್ಯಾಯಾಧೀಶ ಬೀರಪ್ಪ ಕಾಂಬಳೆ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಂ.ಐ. ಹಿರೇಮನಿಪಾಟೀಲ, ಉಪಾಧ್ಯಕ್ಷ ಎ.ಎಂ. ಹದ್ಲಿ, ಪ್ರಧಾನ ಕಾರ್ಯದರ್ಶಿ ಬಿ.ಎಚ್. ಮಾಡಲಗೇರಿ, ಜಂಟಿ ಕಾರ್ಯದರ್ಶಿ ಪಿ.ಬಿ. ಕಣಗಿನಹಾಳ, ಖಜಾಂಚಿ ವಿ.ಎಚ್. ಮೇರವಾಡೆ, ಸರ್ಕಾರಿ ಅಭಿಯೋಜಕರಾದ ಸವಿತಾ ಎಂ.ಶಿಗ್ಲಿ, ಜಿಲ್ಲಾ ಸರ್ಕಾರಿ ವಕೀಲರಾದ ಎಂ.ಎಂ. ಕುಕನೂರ, ಅಪರ ಜಿಲ್ಲಾ ಸರ್ಕಾರಿ ವಕೀಲರಾದ ಜಿ.ಬಿ. ನೀಲರಡ್ಡಿ ಹಾಗೂ ವಕೀಲ ವೃಂದದವರು, ಸಂಧಾನಕಾರ ವಕೀಲರು, ಪಕ್ಷಗಾರರು ಹಾಗೂ ಎಲ್ಲಾ ನ್ಯಾಯಾಲಯಗಳ ಸಿಬ್ಬಂದಿವರ್ಗ ಉಪಸ್ಥಿತರಿದ್ದು ಲೋಕ ಅದಾಲತ್ ಯಶಸ್ವಿಗೊಳಿಸಿದರು. ಎಲ್ಲಾ ತಾಲೂಕುಗಳ ನ್ಯಾಯಾಧೀಶರು ಹಾಗೂ ವಕೀಲ ವೃಂದದವರು, ಸಿಬ್ಬಂದಿವರ್ಗ, ಅಭಿಯೋಜನಾ ಇಲಾಖೆ, ಪೊಲೀಸ್ ಇಲಾಖೆ, ಅಬಕಾರಿ ಇಲಾಖೆ, ಗಣಿ ಮತ್ತು ಭೂ ಇಲಾಖೆ, ಕಾರ್ಮಿಕ ಇಲಾಖೆ, ಕಂದಾಯ ಇಲಾಖೆ ಅಧಿಕಾರಿಗಳು ಕೂಡಾ ಆಯಾ ತಾಲೂಕಾ ನ್ಯಾಯಾಲಯಗಳಲ್ಲಿ ಲೋಕ ಅದಾಲತ್‌ನಲ್ಲಿ ಪಾಲ್ಗೊಂಡು ರಾಜೀ ಸಂಧಾನ ಯಶಸ್ವಿಗೊಳಿಸಿದರು.

ರಾಷ್ಟ್ರೀಯ ಲೋಕ ಅದಾಲತ್‌ಗೆ ಸಹಕಾರ ನೀಡಿದ ವಕೀಲ ವೃಂದದವರಿಗೆ, ಪಕ್ಷಗಾರರಿಗೆ, ಜಿಲ್ಲೆಯ ಎಲ್ಲಾ ನ್ಯಾಯಾಧೀಶರಿಗೆ, ಸಿಬ್ಬಂದಿ ವರ್ಗದವರಿಗೆ, ಜಿಲ್ಲಾ ನ್ಯಾಯಾಲಯದ ತಾಂತ್ರಿಕ ಸಿಬ್ಬಂದಿ ವರ್ಗದವರಿಗೆ, ಜಿಲ್ಲಾಡಳಿತ, ಪೊಲೀಸ್ ಇಲಾಖೆ, ಕಂದಾಯ ಇಲಾಖೆ, ಜಿಲ್ಲಾ ಸರ್ಕಾರಿ ವಕೀಲರಿಗೆ, ಅಪರ ಜಿಲ್ಲಾ ಸರ್ಕಾರಿ ವಕೀಲರಿಗೆ, ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರು ಹಾಗೂ ಸದಸ್ಯರುಗಳಿಗೆ, ಅಭಿಯೋಜನಾ ಇಲಾಖೆ, ಕಾರ್ಮಿಕ ಇಲಾಖೆ, ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿಗಳಿಗೆ, ವಿಮೆ ಕಂಪನಿಯವರಿಗೆ, ಉಪ ವಿಭಾಗಾಧಿಕಾರಿಗಳಿಗೆ, ಅಬಕಾರಿ ಇಲಾಖೆ, ನಗರಸಭೆ, ಕೆ.ಎಸ್.ಆರ್.ಟಿ.ಸಿ, ಬ್ಯಾಂಕ್, ವಾರ್ತಾ ಇಲಾಖೆಯವರಿಗೆ ಹಾಗೂ ಎಲ್ಲಾ ಮಾಧ್ಯಮದವರಿಗೆ, ಲೋಕ ಅದಾಲತ್‌ಗೆ ಸಹಕಾರ ನೀಡಿದ ಎಲ್ಲರಿಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಕೆ.ಗುರುಪ್ರಸಾದ ಅವರು ಧನ್ಯವಾದಗಳನ್ನು ಅರ್ಪಿಸಿದ್ದಾರೆ.

ವಿಶೇಷವಾಗಿ ಗದುಗಿನ ಪ್ರಧಾನ ಕೌಟುಂಬಿಕ ನ್ಯಾಯಾಲಯದಲ್ಲಿ ಹಾಗೂ ಹೆಚ್ಚುವರಿ ಕೌಟುಂಬಿಕ ನ್ಯಾಯಾಲಯದಲ್ಲಿ 9 ಪ್ರಕರಣಗಳಲ್ಲಿ ದಂಪತಿಗಳನ್ನು ಪುನಃ ಒಂದುಗೂಡಿಸಲಾಯಿತು. ರೋಣ ನ್ಯಾಯಾಲಯದಲ್ಲಿ 3 ಜೋಡಿ, ಲಕ್ಷ್ಮೇಶ್ವರ ನ್ಯಾಯಾಲಯದಲ್ಲಿ 2 ಜೋಡಿ, ಮುಂಡರಗಿ ನ್ಯಾಯಾಲಯದಲ್ಲಿ 2 ಜೋಡಿ ದಂಪತಿಗಳನ್ನು ಮನಃ ಒಂದುಗೂಡಿಸಿ ಕಳುಹಿಸಿಕೊಡಲಾಯಿತು. ಒಟ್ಟು 16 ಜೋಡಿದಂಪತಿಗಳು ಈ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಪುನಃ ಒಂದುಗೂಡಿದ್ದು ವಿಶೇಷವಾಗಿದೆ.

### ಹುಬ್ಬಳ್ಳಿಯ ಶ್ರೀ ಸಿದ್ಧಾರೂಢರ ಮಠದಲ್ಲಿ 9ನೇ ವರ್ಷದ ಕಾರ್ಯಕ್ರಮ

# ರಾಜ್ಯ ಮಟ್ಟದ ಭಜನಾ ಸ್ಪರ್ಧೆ ಏ. 10ರಿಂದ



■ ವಿಜಯಸಾಕ್ಷಿ ಸುದ್ದಿ, ಗದಗ

ಜಗದ್ಗುರು ಸಿದ್ಧಾರೂಢ ಸ್ವಾಮೀಜಿ ಅವರ ಜಯಂತ್ಯುತ್ಸವದ ಅಂಗವಾಗಿ ಹುಬ್ಬಳ್ಳಿಯ ಸಿದ್ಧಾರೂಢ ಮಠದಲ್ಲಿ ಸಿದ್ಧಾರೂಢ ಸ್ವಾಮಿಯವರ ಮಠ ಟ್ರಸ್ಟ್ ಕಮಿಟಿ ಏ. 10ರಿಂದ 15ರವರೆಗೆ ರಾಜ್ಯ ಮಟ್ಟದ 9ನೇ ವರ್ಷದ ಭಜನಾ ಸ್ಪರ್ಧೆ ಏರ್ಪಡಿಸಿದೆ ಎಂದು ರಾಜ್ಯ ಮಟ್ಟದ ಭಜನಾ ಸ್ಪರ್ಧೆ ಸಮಿತಿ ಅಧ್ಯಕ್ಷ ಹಾಗೂ ಶ್ರೀಮಠದ ಧರ್ಮದರ್ಶಿ ಶಾಮಾನಂದ ಪೂಜೇರಿ ಹೇಳಿದರು.

ನಗರದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸ್ಪರ್ಧೆಯಲ್ಲಿ ಭಾಗವಹಿಸುವ ಭಜನಾ ತಂಡದವರು ಏ. 10ರೊಳಗಾಗಿ ಶ್ರೀಮಠದ ಟ್ರಸ್ಟ್ ಕಮಿಟಿಯ ಕಾರ್ಯಾಲಯದಲ್ಲಿ ಹೆಸರು ನೋಂದಾಯಿಸಕೊಳ್ಳಬೇಕು. ಭಾಗವಹಿಸುವ ಭಜನಾ ಮೇಳದವರಿಗೆ ಶ್ರೀಮಠದಲ್ಲಿ ವಸತಿ ಹಾಗೂ ಊಟದ ವ್ಯವಸ್ಥೆಯನ್ನು ಮಾಡಲಾಗುವುದು. ಒಂದು ಬದಿಯ ಬಸ್ ಚಾರ್ಜನ್ನು ಪ್ರತಿ ತಂಡದ 6 ಜನರಿಗೆ ನೀಡಲಾಗುವದು. ಸ್ಪರ್ಧೆಯಲ್ಲಿ ಭಾಗವಹಿಸಿದ ಪ್ರತಿಯೊಂದು ಭಜನಾ ತಂಡಕ್ಕೆ ಸವಿನೆನಪಿನ ಕಾಣಿಕೆ ಹಾಗೂ ಪ್ರತಿಯೊಂದು ತಂಡದ ಪ್ರತಿಯೊಬ್ಬ ಕಲಾವಿದರಿಗೂ ಪ್ರಶಸ್ತಿ ಪತ್ರ ನೀಡಲಾಗುವದು ಎಂದು ಹೇಳಿದರು.

ಭಜನಾ ಸ್ಪರ್ಧೆಯಲ್ಲಿ ಭಾಗವಹಿಸುವ ಪ್ರತಿಯೊಂದು ತಂಡದವರಿಗೆ ಮೂರು ಪದಗಳನ್ನು ಹಾಡುವ ಅವಕಾಶವಿದ್ದು, ಮೂರೂ ಪದಗಳನ್ನು 18 ನಿಮಿಷಗಳಲ್ಲಿ ಹಾಡಬೇಕು. ಪ್ರತಿ ತಂಡದವರು ಎರಡು ಪದ್ಯಗಳನ್ನು ಕೈವಲ್ಯ ಸಾಹಿತ್ಯದ ಮೇಲೆ ಕಡ್ಡಾಯವಾಗಿ ಹಾಡಬೇಕು (ಕೈವಲ್ಯ ಸಾಹಿತ್ಯ ಎಂದರೆ ಶ್ರೀಮನ್ ನಿಜಗುಣ ಶಿವಯೋಗಿಗಳವರ, ಶ್ರೀ ಸರ್ಪಭೂಷಣ ಶಿವಯೋಗಿಳವರ, ಶ್ರೀ ಮಹಾಲಿಂಗರಂಗರ ಸಾಹಿತ್ಯಗಳು), ಪ್ರತಿ ತಂಡದವರು ಮೂರನೇ ಪದ್ಯವನ್ನು ಜಗದ್ಗುರು ಸಿದ್ಧಾರೂಢರ ಮೇಲಿನ ಪದ್ಯ, ದಾಸರ ಪದ್ಯ, ಶಿಶುನಾಳ ಶರೀಫರ ಪದ್ಯ ಹಾಗೂ ವಚನ ಸಾಹಿತ್ಯ ಇವುಗಳಲ್ಲಿ ಯಾವುದಾದರೊಂದು ಹಾಡಬಹುದು. ಇಲ್ಲವೇ, ಮೂರು ಪದ್ಯಗಳನ್ನು ಕೈವಲ್ಯ ಸಾಹಿತ್ಯದ ಮೇಲೆ ಹಾಡಬಹುದು. ಸಿದ್ಧಾರೂಢರ ಮೇಲಿನ ಪದ್ಯ, ದಾಸರ ಪದ್ಯ, ಶರೀಫರ ಪದ್ಯ ಹಾಡುವವರು ತಮ್ಮ ಹಾಡಿನ ಸಾಹಿತ್ಯದ ಒಂದು ಪ್ರತಿಯನ್ನು ನಿರ್ಣಾಯಕರ ಕಡೆ ಒಪ್ಪಿಸಿ ಹಾಡಬೇಕು. ತಾವು ಹಾಡುವ ಪದ್ಯದ ಹೆಸರು, ರಚಿಸಿದ ಕವಿಗಳ ಹೆಸರು, ರಾಗ, ತಾಳಗಳ ವಿವರವನ್ನು ಒಂದು ಹಾಳೆಯ ಮೇಲೆ ಬರೆದು ನಿರ್ಣಾಯಕರಲ್ಲಿ ಕೊಟ್ಟು ಹಾಡಬೇಕು.

ಜಾನಪದ ಹಾಗೂ ಸಿನೆಮಾ ಶೈಲಿಯಲ್ಲಿ ಹಾಡುವವರಿಗೆ ಅವಕಾಶ ನೀಡಲಾಗುವದಿಲ್ಲ. ಒಂದು ಸ್ಪರ್ಧೆಯಲ್ಲಿ ಭಾಗವಹಿಸುವ ತಂಡದ ಕಲಾವಿದರ ಸಂಖ್ಯೆ 6ಕ್ಕಿಂತ ಕಡಿಮೆ ಇರಬಾರದು ಮತ್ತು 10ಕ್ಕಿಂತ ಹೆಚ್ಚಿಗೆ ಇರಬಾರದು. ಒಂದು ತಂಡದಲ್ಲಿ ಭಾಗವಹಿಸಿದ ಕಲಾವಿದರಿಗೆ ಮತ್ತೊಂದು ತಂಡದಲ್ಲಿ ಹಾಡಲು ಅವಕಾಶ ಇರುವದಿಲ್ಲ. ಆದರೆ, ತಬಲಾ ವಾದಕರಿಗೆ ಮಾತ್ರ ಕೇವಲ 2 ತಂಡಗಳಲ್ಲಿ ತಬಲಾ ಸಾಥ್ ನೀಡಲು ಅವಕಾಶ ನೀಡಲಾಗುವುದು.

ಇನ್ನುಳಿದ ನಿಯಮಗಳನ್ನು ಸ್ಪರ್ಧೆಯ ಮುಂಚಿತವಾಗಿ ಸ್ಥಳದಲ್ಲಿಯೇ ಎಲ್ಲ ತಂಡದವರಿಗೆ ತಿಳಿಸಲಾಗುವುದು. ಸ್ಪರ್ಧೆಯ ಸಂದರ್ಭದಲ್ಲಿ ಯಾವುದೇ ಸಮಸ್ಯೆಗಳು ಬಂದಲ್ಲಿ ನಿರ್ಣಾಯಕರ ಹಾಗೂ ಶ್ರೀ ಸಿದ್ಧಾರೂಢ ಸ್ವಾಮಿಯವರ ಟ್ರಸ್ಟ್ ಕಮಿಟಿಯ ರಾಜ್ಯ ಮಟ್ಟದ ಭಜನಾ ಸ್ಪರ್ಧೆಯ ಸಮಿತಿಯ ನಿರ್ಣಯವೇ ಅಂತಿಮ. ಇದರಲ್ಲಿ ಬೇರೆಯವರಿಗೆ ಅವಕಾಶ ಇರುವದಿಲ್ಲ ಎಂದರು.

ಸುದ್ದಿಗೋಷ್ಠಿಯಲ್ಲಿ ಟ್ರಸ್ಟ್ ಕಮಿಟಿ ಅಧ್ಯಕ್ಷ ಬಸವರಾಜ ಕಲ್ಯಾಣಶೆಟ್ಟರ, ಪುನೀತ ಮಹಾರಾಜರು, ಆತ್ಮಾನಂದ ಸ್ವಾಮೀಜಿ, ಮಾಜಿ ಶಾಸಕ ಡಿ.ಆರ್. ಪಾಟೀಲ, ಜಿ.ಆರ್. ಓದುಗೌಡರ ಸೇರಿ ಅನೇಕರು ಇದ್ದರು.

ಭಜನಾ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದವರಿಗೆ 1 ಲಕ್ಷ ರೂ, ದ್ವಿತೀಯ 80 ಸಾವಿರ ರೂ., ತೃತೀಯ 70 ಸಾವಿರ ರೂ., ಹಾಗೂ ಸಮಾಧಾನಕರ ಬಹುಮಾನವಾಗಿ 10 ತಂಡಗಳಿಗೆ ತಲಾ 9 ಸಾವಿರ ರೂ. ನೀಡಲಾಗುವುದು. 16 ವರ್ಷದೊಳಗಿನ ಬಾಲಕರ ಹಾಗೂ ಬಾಲಕಿಯರ ತಲಾ ಒಂದು ತಂಡಕ್ಕೆ 10 ಸಾವಿರ ರೂ. ನೀಡಲಾಗುವುದು.

ವೈಯಕ್ತಿಕ ಬಹುಮಾನ (ತಲಾ ಇಬ್ಬರಿಗೆ): ಉತ್ತಮ ಹಾಡುಗಾರರಿಗೆ, ಉತ್ತಮ ಹಾರ್ಮೋನಿಯಂ ವಾದಕರಿಗೆ, ಉತ್ತಮ ತಬಲಾ ವಾದಕರಿಗೆ, ಉತ್ತಮ ತಾಳ ವಾದಕರಿಗೆ, ಉತ್ತಮ ಧಮಡಿ ವಾದಕರಿಗೆ ತಲಾ 3 ಸಾವಿರ ರೂ. ಬಹುಮಾನ ನೀಡಲಾಗುತ್ತಿದೆ. ಮಾಹಿತಿಗಾಗಿ ಹುಬ್ಬಳ್ಳಿಯ ಶ್ರೀ ಸಿದ್ಧಾರೂಢ ಸ್ವಾಮಿಯವರ ಮಠ ಟ್ರಸ್ಟ್ ಮೊಬೈಲ್ ಸಂಖ್ಯೆ–9880169881, 8095882033 ಸಂಪರ್ಕಿಸಬಹುದು ಎಂದು ಹೇಳಿದರು.

### ಡಿ.ಸಿ. ಪಾವಟೆ ಶಿಕ್ಷಣ ಮಹಾವಿದ್ಯಾಲಯದಲ್ಲಿ ಪ್ರಶಿಕ್ಷಣಾರ್ಥಿಗಳಿಗೆ ಸ್ವಾಗತ ಸಮಾರಂಭ

# ಮಕ್ಕಳಲ್ಲಿ ಜೀವನ ಮೌಲ್ಯಗಳನ್ನು ಬಿತ್ತಬೇಕು



■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಸಂಸ್ಕೃತಿಯಲ್ಲಿ ಶಿಕ್ಷಕ ಹುದ್ದೆಗೆ ಮಹತ್ವದ ಸ್ಥಾನವಿದ್ದು, ದೇಶದ ಭವಿಷ್ಯವನ್ನು ರೂಪಿಸುವ ಹೊಣೆಗಾರಿಕೆ ಶಿಕ್ಷಕರ ಮೇಲಿದೆ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವ್ಹಿ. ಸಂಕನೂರ ನುಡಿದರು.


ಅವರು ಇತ್ತೀಚೆಗೆ ನಗರದ ತೋಂಟದಾರ್ಯ ವಿದ್ಯಾಪೀಠದ ಡಿ.ಸಿ. ಪಾವಟೆ ಶಿಕ್ಷಣ ಮಹಾವಿದ್ಯಾಲಯದಲ್ಲಿ ಜರುಗಿದ ಪ್ರಥಮ ವರ್ಷದ ಪ್ರಶಿಕ್ಷಣಾರ್ಥಿಗಳ ಸ್ವಾಗತ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಥಿಯ ವ್ಯಕ್ತಿತ್ವ ನಾಲ್ಕು ಗೋಡೆಯ ಮಧ್ಯದ ವರ್ಗ ಕೋಣೆಯಲ್ಲಿ ನಿರ್ಮಾಣವಾಗುತ್ತದೆ. ಈ ಕೆಲಸ ಮಾಡಬೇಕಿರುವ ಶಿಕ್ಷಕರು ತಮ್ಮ ವಿಷಯಗಳ ಜೊತೆಗೆ ಮಕ್ಕಳಲ್ಲಿ ಜೀವನ ಮೌಲ್ಯಗಳನ್ನು ಬಿತ್ತಬೇಕು. ಕೇವಲ ಸಾಧಾರಣ ಶಿಕ್ಷಕರಾಗದೇ ಬೋಧನಾ ಕೌಶಲ್ಯಗಳನ್ನು ಪರಿಣಾಮಕಾರಿಯಾಗಿ ಅಳವಡಿಸಿಕೊಂಡು ಆದರ್ಶ ಶಿಕ್ಷಕರಾಗಲು ಪ್ರಶಿಕ್ಷಣಾರ್ಥಿಗಳಿಗೆ ಕರೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಎಸ್.ಪಿ. ಗೌಳಿ ಮಾತನಾಡಿ, ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಕೃಪಾಶೀರ್ವಾದದಿಂದ ಹಾಗೂ ಸಂಸ್ಥೆಯ ಕಾರ್ಯದರ್ಶಿಗಳಾದ ಎಸ್.ಎಸ್. ಪಟ್ಟಣಶೆಟ್ಟರ ಕರ್ತೃತ್ವಶಕ್ತಿಯಿಂದ ಆರಂಭವಾದ ಕಾಲೇಜು ಇದಾಗಿದ್ದು, ಪ್ರಶಿಕ್ಷಣಾರ್ಥಿಗಳು ಸಂಸ್ಥೆಯ ಪಾವಿತ್ರ್ಯತೆಗೆ ಹಾಗೂ ತಮ್ಮ ಚಾರಿತ್ರ್ಯಕ್ಕೆ ಧಕ್ಕೆ ಬಾರದಂತೆ ನಡೆದುಕೊಂಡು ಉತ್ತಮ ಶಿಕ್ಷಕರಾಗಿ ಹೊರಹೊಮ್ಮಿ ಎಂದು ಆಶಿಸಿದರು.

2023–24ನೇ ಸಾಲಿನ ವಿದ್ಯಾರ್ಥಿ ಒಕ್ಕೂಟಕ್ಕೆ ಆಯ್ಕೆಯಾದ ಪ್ರಶಿಕ್ಷಣಾರ್ಥಿಗಳಿಗೆ ಉಪನ್ಯಾಸಕ ಎಂ.ಎಂ. ನದಾಫ ಪ್ರಮಾಣ ವಚನ ಬೋಧಿಸಿದರು. ಎಂ.ಕೆ. ಬಂಡಿಹಾಳ ಹಾಗೂ ಎಸ್.ಎಚ್. ರಾಮದುರ್ಗ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಸವಿತಾ ಹಾಗೂ ಸಂಗಡಿಗರ ಪ್ರಾರ್ಥನೆಯೊಂದಿಗೆ ಕಾರ್ಯಕ್ರಮ ಆರಂಭವಾಯಿತು. ಪ್ರಶಿಕ್ಷಣಾರ್ಥಿ ಹೇಮಾ ನೀಲಗುಂದ ಪ್ರಾಸ್ತಾವಿಕವಾಗಿ ಮಾತನಾಡಿದಳು. ಪ್ರತಿಭಾ ರಬಜ್ಜನವರ ಹಾಗೂ ಶಿಲ್ಪಾ ಕಡಿವಾಳ ನಿರೂಪಿಸಿದರು. ರಂಗಪ್ಪ ಉಡಚಂಚಿ ವಂದಿಸಿದರು. ಉಪನ್ಯಾಸಕರಾದ ಡಾ.ಗಿರಿಜಾ ಹಸಬಿ, ಕಲಾವತಿ ಸಂಕನಗೌಡರ, ಎಂ.ವೈ. ಸೈದಾಪೂರ, ಲತಾ ಹಂಡಿ ಸೇರಿದಂತೆ ಕಾಲೇಜಿನ ಪ್ರಶಿಕ್ಷಣಾರ್ಥಿಗಳು ಹಾಜರಿದ್ದರು.



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲೋಕಸಭಾ ಚುನಾವಣೆ ಪ್ರಚಾರಾರ್ಥವಾಗಿ ಕಾರ್ಯಕರ್ತರ ಸಭೆಯನ್ನು ಹಾವೇರಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ, ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಪಕ್ಷದ ಸಂಸ್ಥಾಪಕರ ಭಾವಚಿತ್ರಗಳಿಗೆ ಪುಷ್ಪನಮನಗಳನ್ನು ಅರ್ಪಿಸಿ ಉದ್ಘಾಟಿಸಿದರು.

### ಎಸ್.ಎಸ್.ಕೆ ಮಹಿಳಾ ಮಂಡಳದಿಂದ ಮಹಿಳಾ ದಿನಾಚರಣೆ

# ಹೆಣ್ಣು ಮಕ್ಕಳ ಸುರಕ್ಷತೆಗೆ ಆದ್ಯತೆ ನೀಡಿ



■ ವಿಜಯಸಾಕ್ಷಿ ಸುದ್ದಿ, ಗದಗ

ಹೆಣ್ಣು ಮಕ್ಕಳ ಸಂಪೂರ್ಣ ಸುರಕ್ಷತೆ ಹಾಗೂ ಅವರ ಉನ್ನತ ಶಿಕ್ಷಣಕ್ಕೆ ಆದ್ಯತೆ ನೀಡಿ, ಹೆಣ್ಣು ಭ್ರೂಣಹತ್ಯೆ, ವರದಕ್ಷಿಣೆ, ಬಾಲ್ಯವಿವಾಹವನ್ನು ತಡೆಗಟ್ಟಲು ಮಹಿಳಾ ಸಂಘಟನೆಗಳು ಶ್ರಮಿಸಬೇಕೆಂದು ಸಾಹಿತಿ ಕವಿತಾ ದಂಡಿನ ಹೇಳಿದರು.

ಅವರು ಗದುಗಿನ ಎಸ್.ಎಸ್.ಕೆ ಮಹಿಳಾ ಮಂಡಳ ನಗರದ ಜಗದಂಬಾ ಕಲ್ಯಾಣ ಮಂಟದಲ್ಲಿ ಏರ್ಪಡಿಸಿದ್ದ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಹಿಳಾ ಜಾಗೃತಿ ಕುರಿತು ಮಾತನಾಡಿದರು.

ಮಹಿಳೆಯರು ಹಲವಾರು ತೊಡಕುಗಳನ್ನು ಎದುರಿಸುತ್ತಿದ್ದು, ಕುಟುಂಬ ನಿರ್ವಹಣೆಯಲ್ಲಿ ಪ್ರಮುಖ ಪಾತ್ರ ನಿರ್ವಹಿಸುವ ಮೂಲಕ ಮಹತ್ವದ ಜವಾಬ್ದಾರಿಯನ್ನು ನಿಭಾಯಿಸುತ್ತಿದ್ದಾರೆ. ಮುಖ್ಯವಾಗಿ ಹೆಣ್ಣು ಮಗುವಿನ ಮಹತ್ವದ ಕುರಿತಾಗಿ ತಾಯಂದಿರಲ್ಲಿ ಜಾಗೃತಿ ಮೂಡಿಸಬೇಕಾಗಿದೆ. ಮಹಿಳೆಯರನ್ನು ಆರ್ಥಿಕ, ಸಾಮಾಜಿಕ, ಶೈಕ್ಷಣಿಕವಾಗಿ ಸಶಕ್ತಗೊಳಿಸಬೇಕಾಗಿರುವದು ಅವಶ್ಯವೆಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಎಸ್.ಎಸ್.ಕೆ ಮಹಿಳಾ ಮಂಡಳದ ಅಧ್ಯಕ್ಷೆ ಉಮಾ ಬೇವಿನಕಟ್ಟಿ, ಮಹಿಳೆಯರು ಗೃಹಕೈಗಾರಿಕೆ ಮೂಲಕ ಸ್ವಯಂ ಉದ್ಯೋಗಕ್ಕೆ ಪ್ರಯತ್ನಿಸಬೇಕು. ಸಾಧನೆಗೆ ಯಾವುದೂ ಅಡ್ಡಿಯಿಲ್ಲ. ಗುರಿಯೊಂದಿಗೆ ಮುನ್ನಡೆದರೆ ಯಶಸ್ವಿಯಾಗಬಹುದು ಎಂದರು.

ವೇದಿಕೆಯ ಮೇಲೆ ಉಪಾಧ್ಯಕ್ಷೆ ಸ್ನೇಹಲತಾ ಕಬಾಡಿ, ಸರೋಜಾ ಟಿಕಾಂನದಾರ, ಪಂಚ ಕಮಿಟಿಯ ವಿನೋದ ಶಿದ್ಲಿಂಗ್, ರೇಖಾ ಖಟವಟೆ ಉಪಸ್ಥಿತರಿದ್ದರು.

ಮಹಿಳಾ ದಿನಾಚರಣೆಯ ಅಂಗವಾಗಿ ಏರ್ಪಡಿಸಿದ ವಿವಿದ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ಲಲಿತಾ ಬಾಕಳೆ ಪ್ರಾರ್ಥಿಸಿದರು, ರೇಖಾ ಬೇವಿನಕಟ್ಟಿ ಸ್ವಾಗತಿಸಿದರು, ಸುಶೀಲಾ ದಲಬಂಜನ ನಿರೂಪಿಸಿದರು, ರೇಣುಕಾ ಕಲಬುರ್ಗಿ ವಂದಿಸಿದರು.

ಸುನಂದಾ ಹಬೀಬ, ವಂದನಾ ಶಿದ್ಲಿಂಗ್, ಅಂಬುಬಾಯಿ ಬೇವಿನಕಟ್ಟಿ, ಲಕ್ಷ್ಮೀಬಾಯಿ ಖಟವಟೆ, ಗೀತಾ ಭಾಂಡಗೆ, ಗೀತಾ ಹಬೀಬ, ಕಸ್ತೂರಿ ಭಾಂಡಗೆ ಹಾಗೂ ಮಹಿಳಾ ಮಂಡಳದ ಎಲ್ಲ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಅತಿಥಿಯಾಗಿ ಪಾಲ್ಗೊಂಡ ಗದಗ–ಬೆಟಗೇರಿ ಇನ್ನರ್‌ವ್ಹೀಲ್ ಮಿಡ್‌ಟೌನ್‌ದ ಖಜಾಂಚಿ ರಾಣಿ ಚಂದಾವರಿ ಮಾತನಾಡಿ, ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲಿ ಸಾಧನೆಗೈಯುವಲ್ಲಿ ಯಶಸ್ವಿಯಾಗಿದ್ದಾರೆ. ಸ್ವಯಂ ಉದ್ಯೋಗ ಕೈಗೊಂಡು ಯಶಸ್ವಿ ಉದ್ಯಮಿಯಾಗಿ ಮತ್ತೊಬ್ಬರಿಗೆ ಉದ್ಯೋಗ ನೀಡುವಂತಾಗಬೇಕೆಂದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka